ಸಂಪುಟ: ೦೭/ ಸಂಚಿಕೆ: ೨೧೮/ ಮಂಗಳವಾರ ದಿನಾಂಕ : ೨೧-೧೦-೨೦೨೫/ ಪುಟ: ೬/ ಬೆಲೆ ೨-೦೦
ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ
ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಸರ್ವರಿಗೂ ಬೆಳಕಿನ ಹಬ್ಬ ದೀಪಾವಳಿಯ ಶುಭಾಶಯಗಳು
ಕನ್ನಡ ಪ್ರಾದೇಶಿಕ ದಿನಪತ್ರಿಕೆ
ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ
ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959
Volume : 07/ ISSUE : 218/TUESDAY Date : 21-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ರಾಜ್ಯದಲ್ಲಿ ಅ.29ರ ವರೆಗೆ ಮಳೆ ಸಾಧ್ಯತೆ

**ಬೆಂಗಳೂರು:** ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತದಿಂದಾಗಿ ರಾಜ್ಯದ ಕರಾವಳಿ ಜಿಲ್ಲೆಗಳು ಸೇರಿದಂತೆ ಮಲೆನಾಡು ಭಾಗಗಳಲ್ಲಿ ಅ.29ರ ವರೆಗೆ ಉತ್ತಮ ಮಳೆಯ ಮುನ್ಸೂಚನೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.
ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಬಹುತೇಕ ಭಾಗಗಳಲ್ಲಿ ರಾತ್ರಿ ಗುಡುಗು ಸಹಿತ ಉತ್ತಮ ಮಳೆಯ ಮುನ್ಸೂಚನೆ ಇದೆ. ಮಲೆನಾಡು ಜಿಲ್ಲೆಗಳಾದ ಕೊಡಗು, ಹಾಸನ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳ ಬಹುತೇಕ ಭಾಗಗಳಲ್ಲಿ ಸಂಜೆ ವೇಳೆಗೆ ಗುಡುಗು ಸಹಿತ ಉತ್ತಮ ಮಳೆಯ ಮುನ್ಸೂಚನೆ ಇದೆ.

ಉತ್ತರ ಒಳನಾಡಿನ ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರ್ಗಿ ಜಿಲ್ಲೆಗಳ ಅಲ್ಲಲ್ಲಿ, ಧಾರವಾಡ, ಹಾವೇರಿ, ಗದಗ, ವಿಜಯನಗರ, ದಾವಣಗೆರೆ, ಬಳ್ಳಾರಿ, ಕೊಪ್ಪಳ, ರಾಯಚೂರು, ಯಾದಗಿರಿ, ಬೀದರ್ ಜಿಲ್ಲೆಗಳ ಬಹುತೇಕ ಭಾಗಗಳಲ್ಲಿ ರಾತ್ರಿ ಗುಡುಗು ಸಹಿತ ಮಳೆಯ ಮುನ್ಸೂಚನೆ ಇದೆ. ದಕ್ಷಿಣ ಒಳನಾಡಿನ ಮೈಸೂರು, ಚಾಮರಾಜನಗರ, ಮಂಡ್ಯ ಜಿಲ್ಲೆಗಳಲ್ಲಿ ಅಲ್ಲಲ್ಲಿ ಸಾಮಾನ್ಯ ಮಳೆಯ ಮುನ್ಸೂಚನೆ ಇದ್ದು, ರಾಮನಗರ, ಬೆಂಗಳೂರು ಗ್ರಾಮಾಂತರ ಹಾಗೂ ನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಜಿಲ್ಲೆಗಳ ಹೆಚ್ಚಿನ ಭಾಗಗಳಲ್ಲಿ ಸಂಜೆ ಅಥವಾ ರಾತ್ರಿ ಗುಡುಗು ಸಹಿತ ಮಳೆಯ ಮುನ್ಸೂಚನೆ ಇದೆ. **ಮೀನುಗಾರರಿಗೆ ಎಚ್ಚರಿಕೆ:** ಸೋಮವಾರದಿಂದ (ಅ.21) ಅ.23ರವರೆಗೆ ಕರ್ನಾಟಕ ಕರಾವಳಿಯ ಉದ್ದಕ್ಕೂ ಗಾಳಿಯ ವೇಗವು ಪ್ರತಿ ಗಂಟೆಗೆ 55 ಕಿ.ಮೀ. ಇರಲಿದೆ. ಈ ಅವಧಿಯಲ್ಲಿ ಸಮುದ್ರ ಪ್ರದೇಶಗಳಿಗೆ ಮೀನುಗಾರರು ತೆರಳದಂತೆ ಸೂಚನೆ ನೀಡಲಾಗಿದೆ'

## ಕೇಂದ್ರ ಸರ್ಕಾರದ ಪ್ರವಾಹ ಪರಿಹಾರಕ್ಕೆ ಪ್ರಿಯಾಂಕ್ ಖರ್ಗೆ ಅಸಮಾಧಾನ

**ಬೆಂಗಳೂರು:** ಕರ್ನಾಟಕಕ್ಕೆ ಕೇಂದ್ರ ಸರ್ಕಾರ ನೀಡಿದ ಪ್ರವಾಹ ಪರಿಹಾರ ಹಂಚಿಕೆಗೆ ಅಸಮಾಧಾನ ವ್ಯಕ್ತಪಡಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಬಿಜೆಪಿ ಆಡಳಿತವಿರುವ ರಾಜ್ಯಗಳು ನಿರಂತರವಾಗಿ ಹೆಚ್ಚಿನ ಹಣವನ್ನು ಪಡೆಯುತ್ತಿವೆ. ಆದರೆ, ಎನ್‌ಡಿಎ ಅಥವಾ ಕೇಸರಿ ಪಕ್ಷದ ಸರ್ಕಾರವಿಲ್ಲದ ರಾಜ್ಯಗಳು ಯಾವಾಗಲೂ ಕಡಿಮೆ ಹಣವನ್ನು ಪಡೆಯುತ್ತವೆ ಎಂದು ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆಯನ್ನು ಹೊಂದಿರುವ ಖರ್ಗೆ, ರಾಜ್ಯದಲ್ಲಿ ವರದಿಯಾಗಿರುವ ಭಾರಿ ನಷ್ಟವನ್ನು ಗಮನಿಸಿದರೆ, ಕೇಂದ್ರದಿಂದ ಬಿಡುಗಡೆಯಾದ ಹಣವು ಸಾಕಾಗುವುದಿಲ್ಲ ಎಂದು ಹೇಳಿದರು.

2025–26ನೇ ಸಾಲಿಗೆ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳಿಗೆ ರಾಜ್ಯ ವಿಪತ್ತು ನಿರ್ವಹಣಾ ನಿಧಿ (SDRF) ಅಡಿ ಎರಡನೇ ಕಂತಾಗಿ 1,950.80 ಕೋಟಿ ರೂ.ಗಳನ್ನು ಮುಂಗಡವಾಗಿ ಬಿಡುಗಡೆ ಮಾಡಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾನುವಾರ ಅನುಮೋದನೆ ನೀಡಿದ್ದಾರೆ.
ಈ ವರ್ಷದ ನೈರುತ್ಯ ಮುಂಗಾರಿನಲ್ಲಿ ಅತಿ ಹೆಚ್ಚು ಮಳೆ ಮತ್ತು ಪ್ರವಾಹದಿಂದ ಹಾನಿಗೊಳಗಾದ ಜನರಿಗೆ ತ್ವರಿತವಾಗಿ ನೆರವು ನೀಡಲು ಒಟ್ಟು ಮೊತ್ತದಲ್ಲಿ ಕರ್ನಾಟಕಕ್ಕೆ 384.40 ಕೋಟಿ ರೂ.ಗಳು ಮತ್ತು ಮಹಾರಾಷ್ಟ್ರಕ್ಕೆ 1,566.40 ಕೋಟಿ ರೂ.ಗಳನ್ನು ಹಂಚಿಕೆ ಮಾಡಲು ಅನುಮೋದನೆ ನೀಡಲಾಗಿದೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.

ನಾವು ಅತಿ ಹೆಚ್ಚು ಜಿಎಸ್‌ಟಿ ಸಂಗ್ರಹಿಸುವ ರಾಜ್ಯಗಳಲ್ಲಿ ಒಂದಾಗಿ ದ್ದರೂ, ನಾವು ಅತಿ ಹೆಚ್ಚು ಐಟಿ (ಆದಾಯ ತೆರಿಗೆ) ಪಾವತಿಸುವ ರಾಜ್ಯವಾಗಿದ್ದರೂ, ಐಟಿ (ಮಾಹಿತಿ ತಂತ್ರಜ್ಞಾನ) ರಫ್ತುಗಳಲ್ಲಿ ನಾವು ಮೊದಲ ಸ್ಥಾನದಲ್ಲಿದ್ದರೂ, ಕೇಂದ್ರ ಸರ್ಕಾರವು ನಮಗೆ ಸಾಕಷ್ಟು ಹಣವನ್ನು ನೀಡದೆ ನಮ್ಮನ್ನು



ಹತ್ತಿಕ್ಕುವುದು ನಿಯಮಿತ ಅಭ್ಯಾಸವಾಗುತ್ತಿದೆ. ಜಿಡಿಪಿಗೆ ನಮ್ಮ ಕೊಡುಗೆ ಶೇ 8.9 ಕ್ಕಿಂತ ಹೆಚ್ಚಿದೆ' ಎಂದು ಖರ್ಗೆ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಧಿಗಳ ವಿಕೇಂದ್ರೀಕರಣ, ತೆರಿಗೆಗಳ ವಿಕೇಂದ್ರೀಕರಣದ ವಿಷಯಕ್ಕೆ ಬಂದಾಗ ಕರ್ನಾಟಕಕ್ಕೆ ಯಾವಾಗಲೂ ಅನ್ಯಾಯವಾಗಿದೆ ಎಂದು ಹೇಳಿದರು.

'ಈಗಲೂ ನಿಯಮಗಳ ಪ್ರಕಾರ, ಬಿಡುಗಡೆ ಮಾಡಲಾದ ಪರಿಹಾರ ಸಾಕಾಗುವುದಿಲ್ಲ. ನಮ್ಮ ರಾಜ್ಯದಲ್ಲಿ ಭಾರಿ ಪ್ರಮಾಣದ ನಷ್ಟ ವರದಿಯಾಗಿದೆ. ಬಿಜೆಪಿ ಆಡಳಿತವಿರುವ ರಾಜ್ಯಗಳು ಹೆಚ್ಚಿನದನ್ನು ಪಡೆದರೂ, ಎನ್‌ಡಿಎ ಅಥವಾ ಬಿಜೆಪಿಯೊಂದಿಗೆ ಸಂಬಂಧ ಇಲ್ಲದ ರಾಜ್ಯಗಳು ಯಾವಾಗಲೂ ಕಡಿಮೆ ಪ್ರಮಾಣದಲ್ಲಿ ಪಡೆಯುತ್ತವೆ' ಎಂದು ಅವರು ಹೇಳಿದರು.

ಈ ವರ್ಷ ಮಳೆ ಮತ್ತು ಪ್ರವಾಹದಿಂದಾಗಿ ಕರ್ನಾಟಕದ ಹಲವಾರು ಭಾಗಗಳಲ್ಲಿ ಜೀವಹಾನಿ, ಆಸ್ತಿಪಾಸ್ತಿ, ಬೆಳೆ ಮತ್ತು ಮೂಲಸೌಕರ್ಯಗಳಿಗೆ ಹಾನಿಯಾಗಿದೆ.

## 13ಸಾವಿರ ಶಿಕ್ಷಕರ ನೇಮಕಾತಿಗೆ ಅಧಿಸೂಚನೆ

**ಶಿವಮೊಗ್ಗ:** ರಾಜ್ಯಾದ್ಯಂತ 13 ಸಾವಿರ ಶಿಕ್ಷಕರ ನೇಮಕಾತಿಗೆ ಸರಕಾರ ನಿರ್ಧರಿಸಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಮಾಹಿತಿ ನೀಡಿದ್ದಾರೆ.

ಸೋಮವಾರ ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅಧಿಸೂಚನೆ ಹೊರಡಿಸಲಾಗಿದೆ. ಅಕ್ಟೋಬರ್ 23 ರಿಂದ ನವೆಂಬರ್ 9 ರವರೆಗೆ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಡಿಸೆಂಬರ್ 7ರಂದು ಟಿಇಟಿ ಪರೀಕ್ಷೆ ನಡೆಸಿ, ಡಿಸೆಂಬರ್ 31ರಂದು ಫಲಿತಾಂಶ ಪ್ರಕಟಿಸಲು ನಿರ್ಧರಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಹಿಂದಿನ ಬಿಜೆಪಿ ಸರಕಾರದ ಅವಧಿಯಲ್ಲಿ 4780 ಶಿಕ್ಷಕರನ್ನು ನೇಮಕಾತಿ ಮಾಡಿದ್ದರು. ನಾನು ಶಿಕ್ಷಣ ಸಚಿವರಾಗಿ ಅಧಿಕಾರ ಸ್ವೀಕರಿಸಿದ ಪ್ರಥಮ ವರ್ಷದಲ್ಲಿ 13 ಸಾವಿರ ಶಿಕ್ಷಕರನ್ನು ನೇಮಕ ಮಾಡಿದ್ದೇವೆ. ಈಗ ಮತ್ತೆ 13 ಸಾವಿರ ಶಿಕ್ಷಕರ ನೇಮಕಾತಿಗೆ ಅಧಿಸೂಚನೆ ಹೊರಡಿಸಿದ್ದೇವೆ. ಕಳೆದ ಎರಡೂವರೆ ವರ್ಷದಲ್ಲಿ 26 ಸಾವಿರ ಶಿಕ್ಷಕರ ನೇಮಕಾತಿ ಮಾಡಿದಂತಾಗುತ್ತದೆ ಎಂದರು.

ಶೀಘ್ರದಲ್ಲಿ ಅನುದಾನಿತ ಶಾಲೆಯ ಶಿಕ್ಷಕರ ನೇಮಕಾತಿಗೂ ಸರಕಾರ ಆದೇಶ ಹೊರಡಿಸಲಿದೆ. ರಾಜ್ಯದಲ್ಲಿ 800 ಕೆಪಿಎಸ್ ಶಾಲೆಯನ್ನು ಪ್ರಾರಂಭಿಸಲಾಗುವುದು. 6ನೇ ತರಗತಿಯಿಂದ ಕನ್ನಡದ ಜೊತೆ ಇಂಗ್ಲಿಷ್ ಕಲಿಕೆಗೂ ಅವಕಾಶವಿರಲಿದೆ. ಕರ್ನಾಟಕ ಪಬ್ಲಿಕ್ ಶಾಲೆಗೆ 3 ಸಾವಿರ ಕೋಟಿ ರೂ.



ಮೀಸಲಿಡಲಾಗಿದೆ ಎಂದರು.

ಎಐ ಆಧಾರಿತ ಶಿಕ್ಷಣ ನೀಡಬೇಕೆಂದು ರಾಹುಲ್ ಗಾಂಧಿ ಹೇಳಿದ್ದಾರೆ. ಈಗ ಒಂದನೇ ತರಗತಿಯಿಂದಲೇ ಕಂಪ್ಯೂಟರ್ ಕಲಿಸಲಾಗುವುದು. 6ನೇ ತರಗತಿಯಿಂದಲೇ ಸ್ಕಿಲ್ ಸ್ಕೂಲ್ ಪ್ರಾರಂಭಿಸಲಾಗುವುದು ಎಂದು ಮಧು ಬಂಗಾರಪ್ಪ ಮಾಹಿತಿ ನೀಡಿದ್ದಾರೆ.

ಜಾತಿ ಸಮೀಕ್ಷೆ ಶೇ.90.12ರಷ್ಟು ಆಗಿದೆ, ಸಮೀಕ್ಷೆ ಅಗತ್ಯ ತುಂಬಾ ಇದೆ. ಇದರಿಂದ ಬಜೆಟ್??ಗೆ ಅನುಕೂಲವಾಗಲಿದೆ. ದೊಡ್ಡ ದೊಡ್ಡ ಉದ್ಯಮಿಗಳು ಸಹ ಸಹಕಾರ ನೀಡಬೇಕಾಗುತ್ತದೆ ಎಂದು ಇನ್ಫೋಸಿಸ್ ಹೆಸರನ್ನು ಬಳಸದೆ ಮನವಿ ಮಾಡಿದರು.

ಆರೆಸ್ಸೆಸ್ ಚಟುವಟಿಕೆ ನಿಷೇಧ ಕುರಿತು ಪ್ರತಿಕ್ರಿಯಿಸಿದ ಅವರು, ಆರೆಸ್ಸೆಸ್ ಚಡ್ಡಿಯಿಂದ ಪ್ಯಾಂಟ್‌ಗೆ ಬದಲಾಗಿದೆ, ಆದರೆ ಅಜೆಂಡಾ ಮಾತ್ರ ಬದಲಾಗಿಲ್ಲ, ಆರೆಸ್ಸೆಸ್ ಹಾದಿ ತಪ್ಪಿಸುವ ವ್ಯವಸ್ಥೆ ಆಗಿದೆ ಎಂದು ಹೇಳಿದರು.

## ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ನಿರ್ಬಂಧ ಸರ್ಕಾರದ ವಿರುದ್ಧ ಶೆಟ್ಟರ್ ವಾಗ್ದಾಳಿ

**ಧಾರವಾಡ:** ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ಕೇಂದ್ರ ಸರ್ಕಾರವೇ ಅನುಮತಿ ನೀಡಿರುವಾಗ ರಾಜ್ಯ ಸರ್ಕಾರ ಅದಕ್ಕೆ ನಿರ್ಬಂಧ ಹಾಕುವುದು ಎಷ್ಟರಮಟ್ಟಿಗೆ ಸರಿ ಎಂದು ಸಂಸದ ಜಗದೀಶ್‌ಶೆಟ್ಟರ್ ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ 66 ವರ್ಷಗಳ ಹಿಂದೆ ಹಾಕಿದ್ದ ನಿರ್ಬಂಧವನ್ನು ಕೇಂದ್ರ ಗೃಹ ಇಲಾಖೆ ತೆಗೆದು ಹಾಕಿದೆ. ಆರ್‌ಎಸ್‌ಎಸ್ ಚಟುವಟಿಕೆಗಳಲ್ಲಿ ಸರ್ಕಾರಿ ನೌಕರರು ಭಾಗವಹಿಸಲು ಅವಕಾಶವಿದೆ. ಪಿಡಿಒ ಅಮಾನತು ಸರಿಯಲ್ಲ ಎಂದು ಆಕ್ಷೇಪಿಸಿದರು.

1966ರಲ್ಲಿ ನೆಹರು ಅವರು ಆರ್‌ಎಸ್‌ಎಸ್ ಮತ್ತು ಇಸ್ಲಾಂ ಚಟುವಟಿಕೆಗಳಲ್ಲಿ ಸರ್ಕಾರಿ ನೌಕರರು ಭಾಗವಹಿಸಬಾರದು ಅಂತಾ ಆದೇಶ ಮಾಡಿದ್ದರು. 1970ರಲ್ಲಿ ಅದು ಕೊಂಚ ತಿದ್ದುಪಡಿಯಾಗಿದ್ದು, 1980ರಲ್ಲಿ ಮತ್ತೊಮ್ಮೆ ತಿದ್ದುಪಡಿ ಮಾಡಲಾಗಿದೆ. ಮೋದಿ ಪ್ರಧಾನಿ ಅವರು ಜು. 9, 2024ರಲ್ಲಿ ಸಂಘದ ಚಟುವಟಿಕೆ ಮಾಡುವ ಬಗ್ಗೆ ಮತ್ತೊಂದು ಆದೇಶ ಮಾಡಿದ್ದಾರೆ. ಅದರಲ್ಲಿ ಹಿಂದಿನ ಆದೇಶದಲ್ಲಿದ್ದ ಆರ್‌ಎಸ್‌ಎಸ್ ಹೆಸರನ್ನು ತೆಗೆಯಲಾಗಿದೆ. ಈ ಬಗ್ಗೆ ಪ್ರಧಾನಿ ಕಚೇರಿಯಿಂದ ಆದೇಶವಾಗಿದೆ ಎಂದರು.

ಸಂಘದ ಚಟುವಟಿಕೆಯಲ್ಲಿ ಸರ್ಕಾರಿ ನೌಕರರು ಭಾಗವಹಿಸಲು ತೊಂದರೆ ಇಲ್ಲ. ಹೀಗಾಗಿ ರಾಜ್ಯ ಸರ್ಕಾರ ಈ ರೀತಿ ಆದೇಶಿಸಲು ಅಧಿಕಾರವಿಲ್ಲ. ಲಿಂಗಸೂರಿನಲ್ಲಿ ಪಿಡಿಒರನ್ನು ಅಮಾನತು ಮಾಡಿರುವುದು ಕಾನೂನು ಬಾಹಿರ. ಈ ಆದೇಶದ ಪ್ರಕಾರ ಅಮಾನತು ಮಾಡುವಂತಿಲ್ಲ. ಕೂಡಲೇ ಅಮಾನತು ಆದೇಶವನ್ನು ಹಿಂಪಡೆಯಬೇಕು. ಕೋರ್ಟ್‌ಗೆ ಹೋದರೆ ಸರ್ಕಾರದ ಆದೇಶ ವಜಾ ಆಗುತ್ತದೆ ಎಂದರು.

ಆರ್‌ಎಸ್‌ಎಸ್ ವಿಚಾರದಲ್ಲಿ ತಮ ಮೇಲಿನ ಸಿಎಂ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 2013ರಲ್ಲಿ ಬಿಜೆಪಿಯೇ ಈ ಆದೇಶ ಮಾಡಿತ್ತು ಅಂತಾರೆ. ನಾನು ಸಿಎಂ ಇದ್ದಾಗಿನ



ಆದೇಶವನ್ನೇ ಮುಂದುವರೆಸಿರುವುದಾಗಿ ಹೇಳುತ್ತಾರೆ. ಅವತ್ತು ಆಗಿದ್ದ ಆದೇಶವನ್ನು ಸರಿಯಾಗಿ ಅವರು ಓದಿದ್ದಾರಾ?. ಆದೇಶದಲ್ಲಿ ಎಲ್ಲಿಯೂ ಆರ್‌ಎಸ್‌ಎಸ್ ಪದ ಬಳಸಿಲ್ಲ. ನಮ ಕ್ಯಾಬಿನೆಟ್ ಸಭೆಯಲ್ಲಿ ಮಾಡಿದ್ದ ಆದೇಶವಲ್ಲ. ಯಾವುದೋ ಒಂದು ಕಾರ್ಯಕ್ರಮಕ್ಕೆ ಶಿಕ್ಷಣ ಇಲಾಖೆ ಜಾಗ ಕೇಳಿದ್ದರು. ಶಿಕ್ಷಣ ಇಲಾಖೆ ಜಾಗದಲ್ಲಿ ಖಾಸಗಿ ಕಾರ್ಯಕ್ರಮಕ್ಕೆ ಅವಕಾಶವಿಲ್ಲ ಎಂದು ಆಗ ಶಿಕ್ಷಣ ಇಲಾಖೆ ಅಧಿಕಾರಿಗಳು ಡಿಡಿಪಿಐಗೆ ಬರೆದಿರುವ ಆದೇಶವದು. ಇನ್ನಾದರು ನಾಟಕ ಮಾಡೋದನ್ನು ಬಿಡಿ ಎಂದು ವಾಗ್ದಾಳಿ ಮಾಡಿದರು.

**ಚಿತ್ತಾಪುರ ಘಟನೆ:** ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅನುಮತಿ ಪಡೆಯುವ ಚಿತ್ತಾಪುರದ ಘಟನೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಸಿಎಂ ಸಿದ್ದರಾಮಯ್ಯ, ಪ್ರಿಯಾಂಕ್ ಖರ್ಗೆಗೆ ಏನಾಗಿದೆಯೋ ಗೊತ್ತಿಲ್ಲ. ಸಿದ್ದು ಸರ್ಕಾರ ಆಡಳಿತದಲ್ಲಿ ವಿಫಲವಾಗಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಚಿತ್ತಾಪುರ ಪಥಸಂಚಲನದಲ್ಲಿ ಸಾವಿರಾರು ಯುವಕರು ಭಾಗವಹಿಸುತ್ತಿದ್ದಾರೆ. ಹೀಗಾಗಿ ಇದರ ಜನಪ್ರಿಯತೆಯನ್ನು ಸಿಎಂಗೂ, ಪ್ರಿಯಾಂಕ್ ಖರ್ಗೆಗೆ ಸಹಿಸಲು ಆಗುತ್ತಿಲ್ಲ. ಇದೇ ಕಾರಣಕ್ಕೆ ಚಿತ್ತಾಪುರದಲ್ಲಿ ತಡೆಯುವ ಪ್ರಯತ್ನ ಮಾಡಿದ್ದಾರೆ ಎಂದು ದೂರಿದರು. ರಾಜ್ಯದ ಆರ್ಥಿಕ ಪರಿಸ್ಥಿತಿ ಸರಿಯಿಲ್ಲ, ಗುತ್ತಿಗೆದಾರರು 33,000 ಕೋಟಿ ಬಿಲ್ ಬಾಕಿ ಇದೆ ಎನ್ನುತ್ತಿದ್ದಾರೆ ಎಂದು ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

## ಕಿತ್ತೂರು ಉತ್ಸವ: ಬೆಳಗಾವಿಯಲ್ಲಿ ವೀರಜ್ಯೋತಿಗೆ ಸ್ವಾಗತ



**ಬೆಳಗಾವಿ:** ಕಿತ್ತೂರು ಉತ್ಸವದ ಅಂಗವಾಗಿ ರಾಜ್ಯದಾದ್ಯಂತ ಸಂಚರಿಸುತ್ತಿರುವ ವೀರಜ್ಯೋತಿಯನ್ನು ಸಂಭ್ರಮದಿಂದ ಬರಮಾಡಿಕೊಳ್ಳಲಾಯಿತು. ಖಾನಾಪುರ ತಾಲ್ಲೂಕಿನ ನಂದಗಡ ಮೂಲಕ ಬೆಳಗಾವಿ ನಗರವನ್ನು ಪ್ರವೇಶಿಸಿದ ಜ್ಯೋತಿಯನ್ನು ಮಹಾಪೌರರಾದ ಮಂಗೇಶ್ ಪವಾರ್ ಅವರು ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ಪೂಜೆ ಸಲ್ಲಿಸಿ ಬರಮಾಡಿಕೊಂಡರು.

ಮಹಾನಗರ ಪಾಲಿಕೆ ಆಯುಕ್ತರಾದ ಶುಭ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ತಹಶೀಲ್ದಾರ ಬಸವರಾಜ ನಾಗರಾಳ, ಮುರುಗೇಶ್ ಶಿವಪೂಜಿ, ಕಸ್ತೂರಿ ಭಾಂವಿ ಮತ್ತಿತರರು ಉಪಸ್ಥಿತರಿದ್ದರು.

ಕಲಾತಂಡಗಳ ಜತೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಜ್ಯೋತಿಯು ಕಾಕತಿಗೆ ತೆರಳಿತು. ಕಾಕತಿಯಿಂದ, ಹಿರೇ ಬಾಗೇವಾಡಿ, ಚಿಕ್ಕ ಬಾಗೇವಾಡಿ, ತಿಗಡಿ, ಮರೀಕಟ್ಟಿ, ಸಂಪಗಾಂವ ಮತ್ತಿತರ ಗ್ರಾಮಗಳ ಮೂಲಕ ಬೈಲಹೊಂಗಲಕ್ಕೆ ತೆರಳಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅ.9 ರಂದು ಬೆಂಗಳೂರಿನ ವಿಧಾನಸೌಧದ ಬಳಿ ಜ್ಯೋತಿಯಾತ್ರೆಗೆ ಚಾಲನೆ ನೀಡಿದ್ದರು. ಅ.23 ರಂದು ಜ್ಯೋತಿಯು ಕಿತ್ತೂರು ತಲುಪಲಿದೆ.

### ಅವಹೇಳನಕಾರಿ ಪದ ಬಳಕೆ ಆರೋಪ

## ರಮೇಶ್ ಕತ್ತಿ ವಿರುದ್ಧ ಸಿಡಿದೆದ್ದ ವಾಲ್ಮೀಕಿ ಸಮಾಜ

**ಬೆಳಗಾವಿ:** ವಾಲ್ಮೀಕಿ ಸಮಾಜದ ಬಗ್ಗೆ ಅವಹೇಳನ ಕಾರಿಯಾಗಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಮಾಜಿ ಸಂಸದ ರಮೇಶ್ ಕತ್ತಿ ವಿರುದ್ಧ ವಾಲ್ಮೀಕಿ ಸಮಾಜ ಸಿಡಿದೆದ್ದಿದೆ. ಶೀಘ್ರವೇ ಅವರನ್ನು ಬಂಧಿಸಬೇಕು, ಇಲ್ಲದಿದ್ದರೆ ಬೆಳಗಾವಿ ಬಂದ್‌ಗೆ ಕರೆ ನೀಡಬೇಕಾಗುತ್ತದೆ ಎಂದು ಪ್ರತಿಭಟನಾಕಾರರು ಎಚ್ಚರಿಸಿದ್ದಾರೆ.

ಸೋಮವಾರ ನಗರದ ಚನ್ನಮ್ಮ ವೃತ್ತದಲ್ಲಿ ರಸ್ತೆ ತಡೆ ನಡೆಸಿ, ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದ ವಾಲ್ಮೀಕಿ ಸಮಾಜದ ಮುಖಂಡರು ಮತ್ತು ಕಾರ್ಯಕರ್ತರು ಟಯರ್?ಗೆ ಬೆಂಕಿ ಹಚ್ಚಿ, ರಮೇಶ್ ಕತ್ತಿ ಅವರ ಭಾವಚಿತ್ರಕ್ಕೆ ಚಪ್ಪಲಿ ಹಾರ ಹಾಕಿ, ಅದನ್ನು ದಹನ ಮಾಡಿ ತಮ್ಮ ಆಕ್ರೋಶ ಹೊರ ಹಾಕಿದರು.
ಈ ವೇಳೆ ಮಾತನಾಡಿದ ವಾಲ್ಮೀಕಿ ಸಮಾಜದ ಜಿಲ್ಲಾಧ್ಯಕ್ಷ ರಾಜಶೇಖರ ತಳವಾರ ಅವರು, "ರಮೇಶ್ ಕತ್ತಿ ಜವಾಬ್ದಾರಿಯುತ ಸ್ಥಾನದಲ್ಲಿದ್ದು, ತಮ್ಮ ಸ್ಥಾನದ ಬಗ್ಗೆ ಅರಿವಿಲ್ಲದೇ ಎಸ್ಟಿ ಸಮಾಜದ ಬಗ್ಗೆ ಹಗುರವಾಗಿ ಮಾತನಾಡಿದ್ದು ಸರಿಯಲ್ಲ. ಅವರ ಮಾತಿನಿಂದ ಸಮಾಜದ ಜನತೆಗೆ ನೋವುಂಟಾಗಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡುತ್ತಿದೆ. ರಮೇಶ್ ಕತ್ತಿ ಮಾತಿನಿಂದ ಬೇರೆ ಬೇರೆ ಸಮುದಾಯಗಳ ನಡುವೆ ಸಂಘರ್ಷ ಉಂಟಾಗುವ ಸಾಧ್ಯತೆ ಇದೆ. ಆದ್ದರಿಂದ, ರಮೇಶ್ ಕತ್ತಿ ಅವರನ್ನು ಶೀಘ್ರವೇ ಬಂಧಿಸಬೇಕು. ಇಲ್ಲವಾದಲ್ಲಿ ಬರುವ 24 ರಂದು ವಾಲ್ಮೀಕಿ ಸಮಾಜ ಸೇರಿದಂತೆ ಹಿಂದುಳಿದ ಸಮುದಾಯಗಳಿಂದ ಬೆಳಗಾವಿ ಬಂದ್ ಮಾಡಲಾಗುವುದು" ಎಂದು ಎಚ್ಚರಿಕೆ ನೀಡಿದರು. ವಾಲ್ಮೀಕಿ ಸಮಾಜದ ಮತ್ತೋರ್ವ



ಮುಖಂಡ ಸುರೇಶ ಗವನ್ನವರ್ ಮಾತನಾಡಿ, "ಬೇಡರ ಸಮುದಾಯಕ್ಕೆ ಆಗಿರುವ ಅವಮಾನ ಸಹಿಸುವುದಿಲ್ಲ. ಇತಿಹಾಸವುಳ್ಳ ಜನಾಂಗದ ಬಗ್ಗೆ ತುಚ್ಛವಾಗಿ ಮಾತನಾಡಿದ್ದಾರೆ. ರಾಜಕೀಯ ವ್ಯವಸ್ಥೆಯಲ್ಲಿ ಒಂದು ಶೋಷಿತ ಸಮುದಾಯವನ್ನು ನಿಂದನೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಇದಕ್ಕೆ ಪ್ರತ್ಯುತ್ತರ ನೀಡಲಾಗುವುದು. ಈಗಾಗಲೇ ದೂರು ದಾಖಲು ಮಾಡಲಾಗಿದೆ. ಹೈಕೋರ್ಟ್ ಮೂಲಕ ಕೇಂದ್ರಕ್ಕೂ ಇವರ ನಡವಳಿಕೆ ಬಗ್ಗೆ ಮಾಹಿತಿ ನೀಡಲಾಗಿದೆ. ಸರ್ಕಾರ ರಮೇಶ್ ಕತ್ತಿ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು" ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ಆಪ್ತ ಸಹಾಯಕ ಮಲಗೌಡ ಪಾಟೀಲ, ಮುಖಂಡರಾದ ಸಿದ್ದು ಸುಣಗಾರ, ಮಂಜುನಾಥ ಚಿಕ್ಕಲದಿನ್ನಿ, ಅಂಜುಕುಮಾರ ಗಂಡಕುದರಿ, ಮಹೇಶ ಶೀಗಿಹಳ್ಳಿ, ಸತ್ಯಪ್ಪಾ ತಳವಾರ, ಬಾಳೇಶ ದಾಸನಟ್ಟಿ, ಕಸ್ತೂರಿ ಕೋಲಕಾರ, ಸಂಜಯ ನಾಯಕ ಸೇರಿ ಮತ್ತಿತರರು ಇದ್ದರು.

## ಬೆಳಗಾವಿ ಡಿಸಿಸಿ ಬ್ಯಾಂಕ್ ಅಧ್ಯಕ್ಷನಾಗುವ ಭ್ರಮೆ ನನಗಿಲ್ಲ

**ಚಿಕ್ಕೋಡಿ:** ಬೆಳಗಾವಿ ಡಿಸಿಸಿ ಬ್ಯಾಂಕ್ ಅಧ್ಯಕ್ಷನಾಗುವ ಭ್ರಮೆ ನನಗಿಲ್ಲ. ನಾನು ಎಲ್ಲಿಯೂ ಈ ಸಂಬಂಧ ಹೇಳಿಕೆಯನ್ನು ನೀಡಿಲ್ಲ ಎಂದು ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ತಿಳಿಸಿದ್ದಾರೆ.

ಸೋಮವಾರ ಅಥಣಿಯಲ್ಲಿರುವ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಲ್ಲ. ಸಹಕಾರಿ ರಂಗದಲ್ಲಿ ಉಪಾಧ್ಯಕ್ಷ, ಅಧ್ಯಕ್ಷ ಹಾಗೂ ಅಪೇಕ್ಸ್ ಬ್ಯಾಂಕ್ ಉಪಾಧ್ಯಕ್ಷ ಹಾಗೂ ಸಹಕಾರಿ ಸಚಿವನಾಗಿ ಕೆಲಸ ಮಾಡಿದ್ದೇನೆ ಎಂದು ಹೇಳಿದರು.



30 ವರ್ಷಗಳಿಂದ ನಿರಂತರವಾಗಿ ಸಹಕಾರಿ ರಂಗದಲ್ಲಿ ಸೇವೆ ಸಲ್ಲಿಸಿಕೊಂಡು ಬರುತ್ತಿರುವ ನಾನು, ರಾಜ್ಯದ ಉಪ ಮುಖ್ಯಮಂತ್ರಿಯಾಗಿಯೂ ಕೆಲಸ ಮಾಡಿದ್ದೇನೆ. ಈಗ ಪುನಃ ಜಿಲ್ಲಾ ಮಧ್ಯವರ್ತಿ ಬ್ಯಾಂಕ್‌ನ ಅಧ್ಯಕ್ಷನಾಗಬೇಕು ಎಂಬ ಭ್ರಮೆ ನನಗಿಲ್ಲ ಎಂದು ಲಕ್ಷ್ಮಣ ಸವದಿ ತಿಳಿಸಿದರು.

ಡಿಸಿಸಿ ಬ್ಯಾಂಕ್‌ನ ಚುನಾವಣೆ ನಿನ್ನೆಯಷ್ಟೆ ಮುಗಿದಿದೆ. ಇನ್ನೂ ನಾಲ್ಕು ಕ್ಷೇತ್ರಗಳ ಫಲಿತಾಂಶ ಬರುವುದು ಬಾಕಿಯಿದೆ. ಆನಂತರ, ಬ್ಯಾಂಕಿನ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುತ್ತದೆ. ರಾಜಕಾರಣ ನಿಂತ ನೀರಲ್ಲ, ಇಲ್ಲಿ ಯಾರೂ ಶಾಶ್ವತ ಶತ್ರುಗಳೂ ಇಲ್ಲ, ಮಿತ್ರರೂ ಇಲ್ಲ. ಸಂದರ್ಭ ಬಂದಾಗ ಅದರ ಬಗ್ಗೆ ಮಾತನಾಡೋಣ ಎಂದು ಲಕ್ಷ್ಮಣ ಸವದಿ ಹೇಳಿದರು.

ಡಿಸೆಂಬರ್ ತಿಂಗಳಲ್ಲಿ ನನಗೆ ಶುಕ್ರದೆಸೆ ಪ್ರಾರಂಭವಾಗುತ್ತದೆ. ಅದು ಯಾವ ರೀತಿ ಇರುತ್ತದೆ ಎಂದು ಹೇಳುವುದಿಲ್ಲ. ರಾಜ್ಯಕ್ಕೆ, ದೇಶಕ್ಕೂ ಶುಕ್ರದೆಸೆ ಬರುತ್ತದೆ. ಎಲ್ಲರಿಗೂ ಒಳ್ಳೆಯದಾಗುತ್ತದೆ ಎಂದು ಅವರು ತಿಳಿಸಿದರು.



## ಮರು ಸಮೀಕ್ಷೆ: ಅರ್ಜಿ ಆಹ್ವಾನ

**ಗದಗ:** ಗದಗ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ನಡೆಸಲಾಗುತ್ತಿರುವ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯಲ್ಲಿ ಭಾಗವಹಿಸಲು ಬಯಸುವ ಮಹಿಳೆಯರು ಮತ್ತು ಕುಟುಂಬಗಳಿಂದ ನಿಗದಿತ ನಮೂನೆಗಳಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಮಾಜಿ ದೇವದಾಸಿ ಮರು ಸಮೀಕ್ಷೆ –2025 ರನ್ನು ಕೈಗೊಂಡಿದ್ದು, ಈಗಾಗಲೇ ಸರ್ಕಾರದಿಂದ 1993–94 ಮತ್ತು 2007–2008 ನೇ ಸಾಲಿನಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಇದ್ದು ಮರಣ ಹೊಂದಿರುವ ಮಹಿಳೆಯರ ಕುಟುಂಬದ ಅಧಿಕೃತ ಸದಸ್ಯರು ನಮೂನೆ– 1 ರಲ್ಲಿ ಸಲ್ಲಿಸಬೇಕು. ಈ ಹಿಂದೆ 1993–94 ಮತ್ತು 2007–08 ನೇ ಸಾಲಿನಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಹೊರಗುಳಿದ ಹಾಲಿ ಜೀವಂತವಿರುವ ಹೊಸದಾಗಿ ದೇವದಾಸಿ ಪಟ್ಟಿಗೆ ಸೇರ್ಪಡೆ ಬಯಸುವ ದೇವದಾಸಿ ಮಹಿಳೆಯರು ನಮೂನೆ–2 ರಲ್ಲಿ ಸಲ್ಲಿಸಬೇಕು. ಈ ಹಿಂದೆ 1993–94 ಮತ್ತು 2007–08 ನೇ ಸಾಲಿನಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಹೊರಗುಳಿದ ಮತ್ತು ಪ್ರಸ್ತುತ ಮರಣ ಹೊಂದಿರುವ ಮಹಿಳೆಯರ ಕುಟುಂಬದ ಅಧಿಕೃತ ಸದಸ್ಯರು ನಮೂನೆ–3 ರಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ದಾಖಲೆಗಳಾದ ಮಹಿಳೆಯರ ಆಧಾರ ಕಾರ್ಡ, ಮಹಿಳೆಯರ ಮರಣ ಪ್ರಮಾಣ ಪತ್ರ, ವಂಶವೃಕ್ಷ ಕುಟುಂಬದ ಅಧಿಕೃತ ಸದಸ್ಯರ ಆಧಾರ ಕಾರ್ಡ ಮತ್ತು ಹೊಸ ಸೇರ್ಪಡೆ ಬಯಸುವ ಮಹಿಳೆಯರ ವಯಸ್ಸಿನ ದೃಢೀಕ್ರಣ ಪತ್ರಗಳೊಂದಿಗೆ ಅರ್ಜಿಯನ್ನು ಸಂಬಂಧಪಟ್ಟ ಆಯಾ ತಾಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಅಥವಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ನವೆಂಬರ್ 20 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಜಿಲ್ಲಾ ಮಟ್ಟದ ಸಮಿತಿ ಕಾರ್ಯದರ್ಶಿಗಳ ಪ್ರಕಟಣೆ ತಿಳಿಸಿದೆ.

### ಫಿಜಿಯೋಥೆರಪಿ ಮತ್ತು ವಾಕ್-ಶ್ರವಣ ಕಾಲೇಜುಗಳ ಕಟ್ಟಡಗಳ ಉದ್ಘಾಟನಾ ಸಮಾರಂಭ

## ಉತ್ತರ ಕರ್ನಾಟಕ ಹಿಂದುಳಿದ ಪ್ರದೇಶವಲ್ಲ: ಡಾ.ಬಾಲಸುಬ್ರಮಣ್ಯಂ

**ಬಾಗಲಕೋಟೆ:** ಶೈಕ್ಷಣಿಕ, ಆರ್ಥಿಕ ಮತ್ತು ಧಾರ್ಮಿಕವಾಗಿ ಉತ್ತರ ಕರ್ನಾಟಕ ಸಾಕಷ್ಟು ಅಭಿವೃದ್ಧಿ ಹೊಂದಿದೆ. ಬಿ.ವಿ.ವಿ ಸಂಘದಂತಹ ಸಂಸ್ಥೆಗಳು ಅತ್ಯುತ್ತಮ ಶೈಕ್ಷಣಿಕ ಪರಿಸರವನ್ನು ನಿರ್ಮಾಣ ಮಾಡಿವೆ. ಈ ದಿಸೆಯಲ್ಲಿ ಉತ್ತರ ಕರ್ನಾಟಕವನ್ನು ಹಿಂದುಳಿದ ಪ್ರದೇಶವೆಂದು ಬಿಂಬಿಸುವುದು ಸರಿಯಲ್ಲ ಎಂದು ಭಾರತ ಸರ್ಕಾರ ನವದೆಹಲಿಯ ಎಚ್.ಆರ್, ಸಾಮರ್ಥ್ಯ ನಿರ್ಮಾಣ ಆಯೋಗ ಸದಸ್ಯರಾದ ಡಾ.ಆರ್ ಬಾಲಸುಬ್ರಮಣ್ಯಂ ಅವರು ಹೇಳಿದರು.



ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಆವರಣದಲ್ಲಿ ಫಿಜಿಯೋಥೆರಪಿ ಹಾಗೂ ಸ್ಪೀಚ್ ಆ್ಯಂಡ್ ಹಿಯರಿಂಗ್ ಕಾಲೇಜುಗಳ ಕಟ್ಟಡಗಳನ್ನು ಉದ್ಘಾಟಿಸಿ ಮಾತನಾಡಿದ ಅವರು ಶಿಕ್ಷಣದ ಉದ್ದೇಶ ಜ್ಞಾನ ನೀಡುವುದಾಗಿದ್ದರೂ ಅದು ಮಾನವೀಯತೆ ತುಂಬಿದ ಜ್ಞಾನವಾಗಿರಬೇಕು. ಭಾವಿಸುವ ಹೃದಯ, ಆಲೋಚಿಸುವ ತಲೆ ಮತ್ತು ಕ್ರಿಯಾಶಕ್ತಿಯಿಂದ ಮನುಷ್ಯ ಅದ್ಭುತವಾದದ್ದನ್ನು ಸಾಧಿಸಬಹುದು. ಈ ನಿಟ್ಟಿನಲ್ಲಿ ಶಿಕ್ಷಣದ ಮೂಲಕ ವಿದ್ಯಾರ್ಥಿಗಳಲ್ಲಿ ಈ ಉತ್ತಮ ಗುಣಗಳನ್ನು ಬೆಳೆಸಬೇಕು. ಡಾ.ವೀರಣ್ಣ ಚರಂತಿಮಠ ಅವರು ಬಿ.ವಿ.ವಿ ಸಂಘದ ಮೂಲಕ ಶಿಕ್ಷಣ, ಸಾಮಾಜಿಕ ಮತ್ತು ಧಾರ್ಮಿಕ ಕ್ಷೇತ್ರಗಳಿಗೆ ವಿಶಿಷ್ಠ ಕೊಡುಗೆ ನೀಡುತ್ತಿರುವುದು ಶ್ಲಾಘನೀಯ ಎಂದರು.

ಸಮಾರಂಭದ ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಕೊಪ್ಪಳದ ಅಭಿನವ ಗವಿಸಿದ್ಧೇಶ್ವರ ಮಹಾಸ್ವಾಮಿಗಳು ಲೋಕಕ್ಕೆ ಉಪಯೋಗವಾಗುವವನೆ ನೀಜವಾದ ಯೋಗಿಗಳಾಗಿದ್ದು ಅಂಥ ಚಿಂತಕರು ಚಿಂತಿಸಿದ ಬಹುಮುಖ್ಯ ಸಂಗತಿ ಬದುಕು ಕುರಿತಾಗಿದೆ. ದೇವರು ನೀಡಿದ ಬದುಕು ಸಾರ್ಥಕವಾಗಬೇಕು. ಅಂಥ ಸಾರ್ಥಕತೆ ಉತ್ತಮ ಕೆಲಸಗಳಿಂದ ಪ್ರಾಪ್ತವಾಗುತ್ತದೆ. ಬಿ.ವಿ.ವಿ ಸಂಘ ಮಕ್ಕಳ ಎದೆಯಲ್ಲಿ ಅಕ್ಷರದೀಪ ಬೆಳಗುವ ಮಹೋನ್ನತ ಕಾರ್ಯ ಮಾಡುತ್ತಿದೆ. ಒಂದರ್ಥದಲ್ಲಿ ಬಿ.ವಿ.ವಿ ಸಂಘ ಈ ನೆಲದ ನಳಂದವಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಸಿ.ಚರಂತಿಮಠ ಅವರು ಬಾಗಲಕೋಟೆ ಜಿಲ್ಲೆಯಲ್ಲಿ ಫಿಜಿಯೋಥೆರಪಿ ಹಾಗೂ ಸ್ಪೀಚ್ ಆ್ಯಂಡ್ ಹಿಯರಿಂಗ್ ಕಾಲೇಜುಗಳನ್ನು ಸ್ಥಾಪಿಸಬೇಕೆನ್ನುವ ಕನಸು ನನಸಾಗಿದೆ. ಉದ್ಘಾಟನೆಗೊಂಡ ಮಹಾವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಅಧ್ಯಯನಕ್ಕೆ ಅಗತ್ಯವಾದ ಎಲ್ಲ ಮೂಲಭೂತ ಅಗತ್ಯಗಳನ್ನು ಒದಗಿಸಲಾಗಿದೆ ಎಂದರು.

ನಾಡಗೀತೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಕುಮಾರಿ ಅರ್ಪಿತಾ ಮತ್ತು ಕುಮಾರಿ ಬಸವಜ್ಯೋತಿ ಪ್ರಾರ್ಥಿಸಿದರು. ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಸ್ವಾಗತಿಸಿದರು. ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ) ಅತಿಥಿಗಳನ್ನು ಪರಿಚಯಿಸಿದರು.

ಮೆಡಿಕಲ್ ಕಾಲೇಜ್ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಪ್ರಾಸ್ತಾವಿಕ ಮಾತನಾಡಿದರು. ವೇದಿಕೆಯಲ್ಲಿ ಡಾ.ಬಾಲಸುಬ್ರಮಣ್ಯಂ ಅವರನ್ನು ಸನ್ಮಾನಿಸಲಾಯಿತು.

ಡಾ.ನಾರಾಯಣ ಮುತಾಲಿಕ ಮತ್ತು ಡಾ.ಶಾಂಭವಿ ಕುಲಕರ್ಣಿ ಕಾರ್ಯಕ್ರಮವನ್ನು ನಿರೂಪಿಸಿದರು. ಬಿ.ವಿ.ವಿ.ಸಂಘದ ಗೌರವಾನ್ವಿತ ಸದಸ್ಯರು, ವಿವಿಧ ಕ್ಷೇತ್ರಗಳ ಆಹ್ವಾನಿತ ಗಣ್ಯರು, ಅಂಗಸಂಸ್ಥೆಗಳ ಮುಖ್ಯಸ್ಥರು, ಮಾಧ್ಯಮ ಮಿತ್ರರು, ಮಹಾವಿದ್ಯಾಲಯದ ಬೋಧಕರು ಮತ್ತು ವಿದ್ಯಾರ್ಥಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು. ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

> ಮಕ್ಕಳ ಎದೆಯಲ್ಲಿ ಅಕ್ಷರದೀಪ ಬೆಳಗುವ ಮಹೋನ್ನತ ಕಾರ್ಯದ ಮೂಲಕ ಬಿ.ವಿ.ವಿ ಸಂಘ ಈ ನೆಲದ ನಳಂದವಾಗಿದೆ.–
> **ಅಭಿನವ ಗವಿಸಿದ್ಧೇಶ್ವರ ಮಹಾಸ್ವಾಮಿಗಳು, ಗವಿಮಠ ಕೊಪ್ಪಳ**

### ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಸೂಚನೆ

## ತಪಾಸಣೆ ಕೈಗೊಂಡು ಬಾಲಕಾರ್ಮಿಕರನ್ನು ರಕ್ಷಿಸಿ

**ಕೊಪ್ಪಳ:** ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಅನಿರೀಕ್ಷಿತ ದಾಳಿ, ತಪಾಸಣೆಯನ್ನು ಕೈಗೊಂಡು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಣೆ ಮಾಡುವಂತೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನಾ ಕ್ರಿಯಾ ಯೋಜನೆಯ ಅನುಷ್ಠಾನ ಪ್ರಗತಿ ಕುರಿತಂತೆ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಕಾರ್ಯಕಾರಿ ಹಾಗೂ ಜಿಲ್ಲಾ ಟಾಸ್ಕ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ನಗರ ಪ್ರದೇಶಗಳಲ್ಲಿನ ಕಿರಾಣಿ, ಬಟ್ಟೆ ಅಂಗಡಿಗಳು, ಹೋಟೆಲ್, ಗ್ಯಾರೇಜ್, ಕೋಳಿ ಫಾರಂ ಹಾಗೂ ಇತರೆ ವಾಣಿಜ್ಯ ಸಂಸ್ಥೆಗಳು ಮತ್ತು ಕಾರ್ಖಾನೆಗಳು, ಕೈಗಾರಿಕೆ ಪ್ರದೇಶಗಳಲ್ಲಿ ಯಾವುದೇ ರೀತಿಯ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ನೇಮಿಸಿಕೊಂಡಿದ್ದಲ್ಲಿ, ಸಂಬಂಧಪಟ್ಟ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಬೇಕು. ಈ ಸಂದರ್ಭದಲ್ಲಿ ರಕ್ಷಣೆಯಾದ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರಿಗೆ ಸೂಕ್ತ ಪುನರ್ವಸತಿ ಕಲ್ಪಿಸಬೇಕು ಮತ್ತು ಆ ಮಕ್ಕಳನ್ನು ಬಾಲ ಕಾರ್ಮಿಕತೆಗೆ ತಳ್ಳಿದ ಪೋಷಕರಿಗೂ ಸೂಕ್ತ ಸಮಾಲೋಚನೆ ಮೂಲಕ ಮಕ್ಕಳ ಶಿಕ್ಷಣ ಹಾಗೂ ಉತ್ತಮ ಜೀವನ ರೂಪಿಸಲು ಮುಂದಾಗುವಂತೆ ಮನವರಿಕೆ ಮಾಡಿಕೊಡಬೇಕು. ಮಕ್ಕಳ ಪರಿಶೀಲನೆ ಕಾರ್ಯ ಮಾಡುವುದರಿಂದ ಕೂಡ ಮಕ್ಕಳು ಬಾಲಕಾರ್ಮಿಕತೆಗೆ ಒಳಗಾಗುವುದನ್ನು ತಪ್ಪಿಸಬಹುದು ಎಂದರು.

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಎಲ್ಲಾ ರೀತಿಯ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಆಯಾ ವೃತ್ತದ ಕಾರ್ಮಿಕ ನಿರೀಕ್ಷಕರು ಬಾಲಕಾರ್ಮಿಕ ಯೋಜನಾಧಿಕಾರಿಗಳೊಂದಿಗೆ ನಿಯಮಿತವಾಗಿ ಹೆಚ್ಚಿನ ಪ್ರಮಾಣದಲ್ಲಿ ಬಾಲಕಾರ್ಮಿಕ ತಪಾಸಣೆಗೆ ವಿವಿಧ ಪ್ರದೇಶ, ಕಾರ್ಖಾನೆ, ಮಾರುಕಟ್ಟೆಗಳಿಗೆ ಭೇಟಿ ನೀಡಬೇಕು. ಬೇರೆ ಬೇರೆ ರಾಜ್ಯಗಳಿಂದ ಮತ್ತು ವಿವಿಧ ಹಳ್ಳಿಗಳಿಂದ ಕಾರ್ಖಾನೆಗಳಿಗೆ ದುಡಿಯಲು ಬರುವ ಬಡ ಕಾರ್ಮಿಕರು ವಾಸಿಸುವಂತಹ ಸ್ಥಳಗಳಲ್ಲಿ ಹಾಗೂ ವಿಶೇಷವಾಗಿ ಇಟ್ಟಿಗೆ ಭಟ್ಟಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ವಾಸಿಸುವ ಸ್ಥಳಗಳಿಗೆ ಭೇಟಿ ನೀಡಿ, ಅವರ ಮಕ್ಕಳನ್ನು ಅಂಗನವಾಡಿ ಕೇಂದ್ರ ಮತ್ತು ಸಮೀಪದ ಸರ್ಕಾರಿ ಶಾಲೆಗೆ ಸೇರಿಸಬೇಕು. ಅವಶ್ಯವಿದ್ದಲ್ಲಿ ಟೆಂಟ್ ಶಾಲೆಗಳನ್ನು ತೆರೆದು ವಲಸೆ ಕಾರ್ಮಿಕರ ಮಕ್ಕಳಿಗೆ ಶಿಕ್ಷಣ ಒದಗಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.



ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ್ ಅವರು ಮಾತನಾಡಿ, ರಕ್ಷಿಸಲ್ಪಟ್ಟ ಬಾಲಕಾರ್ಮಿಕರನ್ನು ನಿಯಮಾನುಸಾರವಾಗಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಿದ ನಂತರದಲ್ಲಿ ಅವರನ್ನು ವಸತಿ ನಿಲಯಗಳಿಗೆ ದಾಖಲಿಸಬೇಕು. ಬಾಲಕಾರ್ಮಿಕರ ಕುಟುಂಬಕ್ಕೆ ಆದಾಯದ ಮೂಲವನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಯೋಜನೆಗಳನ್ನು ಪರಿಚಯಿಸಿ, ಸ್ವಾವಲಂಬನೆಯಿಂದ ಜೀವನ ನಡೆಸಲು ಅವರಿಗೆ ಸರ್ಕಾರದ ಸೌಲಭ್ಯಗಳನ್ನು ಒದಗಿಸಿ ಕೊಡಬೇಕು ಎಂದು ಹೇಳಿದರು.

ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಬಸವರಾಜ ಹಿರೇಗೌಡ್ರ ಅವರು ಮಾತನಾಡಿ, ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಹಾಗೂ ಪುನರ್ವಸತಿ ಸೊಸೈಟಿ ವತಿಯಿಂದ ಅಗತ್ಯ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಜಿಲ್ಲಾ ಮತ್ತು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳಿಂದ ತಪಾಸಣೆ ನಡೆಸಿ ಜಿಲ್ಲೆಯಲ್ಲಿ ಬಾಲಕಾರ್ಮಿಕ, ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ 67 ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಪತ್ತೆ ಮಾಡಲಾಗಿದ್ದು, 17 ಪ್ರಕರಣಗಳನ್ನು ಸಂಬಂಧಪಟ್ಟ ನ್ಯಾಯಾಲಯಗಳಲ್ಲಿ ದಾಖಲಿಸಲಾಗಿದೆ. ಬಾಲಕಾರ್ಮಿಕರಾಗಿ ಪತ್ತೆಯಾದ 6 ಮಕ್ಕಳಿಗೆ ಮಾಲೀಕರಿಂದ ವಸೂಲಿಯಾದ ದಂಡದ ಮೊತ್ತ ಮತ್ತು ಸರ್ಕಾರದ ವಂತಿಕೆ ಸೇರಿ ಕಾರ್ಪಸ್ ಫಂಡ್ ಮೊತ್ತವನ್ನು ಒಟ್ಟು 35,000 ರೂ.ಗಳನ್ನು ಪ್ರತಿ ಮಗುವಿಗೆ ಜಿಲ್ಲಾಧಿಕಾರಿಗಳು ಹಾಗೂ ಕಾರ್ಮಿಕ ಅಧಿಕಾರಿಗಳ ಮೂಲಕ ಬಾಂಡ್ ಮತ್ತು ಚೆಕ್‌ಗಳನ್ನು ವಿತರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಸುಧಾ ಗರಗರವರು ಮಾತನಾಡಿ ಸೊಸೈಟಿಗೆ ರಾಜ್ಯದಿಂದ ಬಂದಿರುವ ಸುತ್ತೋಲೆಗಳ ಕುರಿತು ಮಾಹಿತಿ ನೀಡಿದರು. ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ ಶೆಟ್ಟೆಪ್ಪನವರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಂತರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ

**ಗದಗ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಇವರ ವತಿಯಿಂದ ಶನಿವಾರ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿಯಲ್ಲಿ ಅಂತರಾಷ್ಟ್ರೀಯ ಹೆಣ್ಣುಮಗುವಿನ ದಿನಾಚರಣೆ ಪ್ರಯುಕ್ತ ಜಾಗೃತಿ ಕಾರ್ಯಕ್ರಮವನ್ನು ಮಹಾವೀರ್ ಜೈನ್ ಹಿರಿಯ ಹಾಗೂ ಪ್ರೌಢ ಶಾಲೆ, ಗದಗ ಇಲ್ಲಿ ಹಮ್ಮಿಕೊಳ್ಳಲಾಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆ ಕುರಿತಂತೆ ಅಂತರಾಷ್ಟ್ರೀಯ ಹೆಣ್ಣುಮಗುವಿನ ದಿನಾಚರಣೆಯ ಮಹತ್ವ ಹಾಗೂ ಲಿಂಗಾನುಪಾತ ಮತ್ತು ಲಿಂಗ ಸಮಾನತೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಅಡ್ವಕೇಟ್ ಕುಮಾರಿ ಮಧುಶ್ರೀ ಜಿ ಪೂಜಾರಿ ಇವರು ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಹಾಗೂ ಇತರೆ ಕಾನೂನು ಸೌಲಭ್ಯಗಳ ಕುರಿತು ಮಾಹಿತಿಯನ್ನು ನೀಡಿದರು. ಸುಜಾತಾ ಮಠಪತಿ, ಆಡಳಿತಾಧಿಕಾರಿಗಳು ಸಖಿ ಒನ್ ಸ್ಟಾಪ್ ಸೆಂಟರ್ ಇವರು ಸಮಾಜದಲ್ಲಿ ಹೆಣ್ಣುಮಕ್ಕಳು ಹೆಚ್ಚು ಸೂಕ್ಷ್ಮದಿಂದಿರಬೇಕು ಹಾಗೂ ಯಾವುದೇ ಆಮಿಷಗಳಿಗೆ ಬಲಿಯಾಗಬಾರದೆಂದು ತಿಳಿಸಿದರು. ಶ್ರೀಮತಿ ಮಧುಶ್ರೀ ಪಿ ಉಪ್ಪಾರ ಜಂಡರ್ ಸ್ಪೆಷಲಿಸ್ಟ್ ಮಿಷನ್ ಶಕ್ತಿ ಯೋಜನೆ ಇವರು ಮಕ್ಕಳ ಸಹಾಯವಾಣಿ ಹಾಗೂ ಮಹಿಳಾ ಸಹಾಯವಾಣಿ ಕುರಿತು ಮಾಹಿತಿಯನ್ನು ನೀಡಿದರು

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅನುಪಮಾ ಅಂಗಡಿ, ಅಧೀಕ್ಷಕಿ ರೇಣುಕಾ ಮಾಗಡಿ, ಪೊಲೀಸ ಉಪಅಧೀಕ್ಷಕ ಶ್ರೀಯುತ ಮಹೇಶ ಹಾದಿಮನಿ, ಶೈಲಜಾ ಧರಮ್‌ಸಿ, ಎಮ್ ಎಸ್ ತಿಪ್ಪಾಪುರ, ಶ್ರೀಮತಿ ಸುಜಾತಾ ಮಠಪತಿ, ಆಡಳಿತಾಧಿಕಾರಿಗಳು ಸಖಿ ಒನ್ ಸ್ಟಾಪ್ ಸೆಂಟರ್, ಮಧುಶ್ರೀ ಪಿ ಉಪ್ಪಾರ ಜಂಡರ್ ಸ್ಪೆಷಲಿಸ್ಟ್ ಮಿಷನ್ ಶಕ್ತಿ ಯೋಜನೆ ಹಾಗೂ ಶಾಲೆಯ ಶಿಕ್ಷಕ ವೃಂದದವರು ಹಾಜರಿದ್ದರು.

ಪೂಜಾ ಭರಮಗೌಡರ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.



## ಅರಣ್ಯ ಪ್ರದೇಶದಲ್ಲಿ ಗಾಂಜಾ ಬೆಳೆಯುತ್ತಿದ್ದರೆ ಕ್ರಮ ತೆಗೆದುಕೊಳ್ಳಿ: ಜಿಲ್ಲಾಧಿಕಾರಿ ಡಾ. ಇಟ್ನಾಳ

**ಕೊಪ್ಪಳ:** ಅರಣ್ಯ ಪ್ರದೇಶದಲ್ಲಿ ಗಾಂಜಾ ಬೆಳೆಯುವುದು ಕಂಡು ಬಂದರೆ ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಉಪ ಅರಣ್ಯ ಸಂರಕ್ಷಣಾಧಿಕಾರಿಗೆ ಸೂಚನೆ ನೀಡಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆದ ನಾರ್ಕೋ ಕೋ–ಆಡಿನೇಷನ್ ಸೆಂಟರ್ (NCORD) ಸಮನ್ವಯ ಸಮಿತಿಯ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಮಾದಕ ವಸ್ತುಗಳ ಉತ್ಪನ್ನ, ಸಾಗಾಟ, ಸಂಗ್ರಹ ಮತ್ತು ಮಾರಾಟ ಶಿಕ್ಷಾರ್ಹ ಅಪರಾದವಾಗಿದೆ. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಧಾಬಾ, ಹೋಟೆಲ್, ರೆಸಾರ್ಟ್ಗಳಿಗೆ ಸರಪ್ರೈಸ್ ಭೇಟಿ ನೀಡಿ, ಹಾಗೇನಾದರೂ ಮಾಧಕ ವಸ್ತುಗಳ ಸೇವನೆ, ಮಾರಾಟ ಕಂಡು ಬಂದರೆ ಅವುಗಳ ಮೇಲೆ ಕೇಸಗಳನ್ನು ದಾಖಲಿಸಬೇಕೆಂದರು. ಜನರು ದುಶ್ಚಟಗಳಿಂದ ದೂರ ಇರಲು ವಿವಿಧ ಇಲಾಖೆಗಳ ಸಹಯೋಗದಲ್ಲಿ ಶಾಲಾ–ಕಾಲೇಜುಗಳು, ಶಿಕ್ಷಣ ಸಂಸ್ಥೆಗಳು, ಹಾಸ್ಟೆಲಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಸ್ಥಳಗಳಲ್ಲಿ ಮಾದಕ ವ್ಯಸನದಿಂದಾಗುವ ದುಷ್ಪರಿಣಾಮಗಳ ಕುರಿತು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ ಎಲ್. ಅರಸಿದ್ದಿ ಅವರು ಮಾತನಾಡಿ, ಆಸ್ಪತ್ರೆಗಳಲ್ಲಿ ಯಾವ ರೀತಿಯ ಕೇಸಗಳು ಬರುತ್ತವೆ ಎನ್ನುವುದರ ಕುರಿತು ನಮಗೆ ವರದಿ ನೀಡಬೇಕೆಂದು ಔಷಧ ನಿಯಂತ್ರಣ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇಂತಹ ಪ್ರಕರಣಗಳು ಜಿಲ್ಲೆಯಲ್ಲಿ ಕಂಡು ಬಂತರೆ ತಕ್ಷಣ ಕ್ರಮ ವಹಿಸಲಾಗುತ್ತದೆ. ಈ ಕುರಿತು ನಮ್ಮ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗುವುದು ಎಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ನಿರ್ಮಲಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಟಿ.ಲಿಂಗರಾಜು, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರಾದ ಸುರೇಶ ಜಿ. ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನಾಳೆ ಬನಹಟ್ಟಿಯ ಶ್ರೀ ಮಲ್ಲಿಕಾರ್ಜುನ ದೇವರ ಜಾತ್ರೆ

**ರಬಕವಿ–ಬನಹಟ್ಟಿ:** ಒಂದುವರೆ ಶತಮಾನದ ಇತಿಹಾಸವಿರುವ ಇಲ್ಲಿನ ಸೋಮವಾರ ಪೇಟೆ ಸಮಸ್ತ ದೈವ ಮಂಡಳಿ ಹಾಗು ಶ್ರೀ ಮಲ್ಲಿಕಾರ್ಜುನ ಸದ್ಭಕ್ತ ಮಂಡಳಿಯವರು ಪ್ರತಿ ವರ್ಷ ನಡೆಸಿಕೊಂಡು ಬರುತ್ತಿರುವ ಶ್ರೀ ಮಲ್ಲಿಕಾರ್ಜುನ ದೇವರ ಜಾತ್ರಾ ಮಹೋತ್ಸವ ನಿಮಿತ್ತ ರಥೋತ್ಸವವು ಅ.22 ಬುಧವಾರದಂದು ದೀಪಾವಳಿ ಪಾಡ್ಯಮಿ ದಿನದಂದು ಜರುಗಲಿದೆ.



ರಾತ್ರಿ 8 ಗಂಟೆಗೆ ಶ್ರೀ ಮಲ್ಲಿಕಾರ್ಜುನ ದೇವರ ರಥೋತ್ಸವ ನಡೆಯುವದು. ಸುಮಾರು 42 ಉಪಜಾತಿಗಳ ನೇತೃತ್ವದಲ್ಲಿ ಸ್ಥಾಪಿತಗೊಂಡ ಈ ದೈವ ಮಂಡಳಿಯ ನೇತೃತ್ವದಲ್ಲಿ ಜಾತ್ರೆ ನಡೆಯಲಿದ್ದು, ನಗರದ ಮಲ್ಲಿಕಾರ್ಜುನ ದೇವರ ಗುಡಿಯಿಂದ ಶಂಕರ ಜುಂಜಪ್ಪನವರರ ಮನೆಯವರೆಗೆ ರಥೋತ್ಸವ ಕಾರ್ಯಕ್ರಮವು ಜರುಗಲಿದೆಯೆಂದು ಸಮಿತಿಯು ತಿಳಿಸಿದೆ. ನಗರದ ಆರಾಧ್ಯ ದೈವ ಶ್ರೀ ಕಾಡಸಿದ್ಧೇಶ್ವರ ಜಾತ್ರೆಯಂತೆ ಪಟಾಕಿಗಳ ಸುರಿಮಳೆ ಇಲ್ಲಿಯು ಕೂಡಾ ಅತೀ ವಿಜೃಂಭಣೆಯಿಂದ ನಡೆಯಲಿದೆ. ಅಲ್ಲದೆ ನಂತರ ರಾತ್ರಿ 9 ಗಂಟೆಗೆ ಖ್ಯಾತ ಆಕಾಶವಾಣಿ ಮತ್ತು ದೂರದರ್ಶನ ಕರಡಿ ಮೇಳವಾದ ರಬಕವಿ ಹಾಗು ಮಹಾಲಿಂಗಪೂರದ ಕರಡಿ ಮೇಳ ಕಾರ್ಯಕ್ರಮವು ನಡೆಯಲಿವೆ. ನಗರದ ಗಣ್ಯ ವ್ಯಕ್ತಿಯಾಗಿದ್ದ ದಿ. ಬಸಲಿಂಗಪ್ಪ ಶೆಟ್ಟರರು ನೀಡಿದ ಭವ್ಯವಾದ ರಥ ಜಾತ್ರೆಗೆ ಮತ್ತಷ್ಟು ಕಳೆ ನೀಡಲಿದೆ.

ಈ ಜಾತ್ರಾ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಬಂಡಿಗಣಿ ಬಸವಗೋಪಲ ನೀಲಮಾಣಿಕಮಠದ ದಾನೇಶ್ವರಶ್ರೀ, ಚರಂತಯ್ಯ ಹಿರೇಮಠ, ತೇರದಾಳ ಕ್ಷೇತ್ರದ ಶಾಸಕ ಸಿದ್ದು ಸವದಿ, ಶಾಸಕಿ, ಮಾಜಿ ಸಚಿವೆ ಉಮಾಶ್ರೀ, ದೇವರಾಜ ಅರಸ ಹಿಂದುಳಿದ ವರ್ಗಗಳ ನಿಗಮದ ಅಧ್ಯಕ್ಷ ಕೀರ್ತಿ ಗಣೇಶ, ಸಿದ್ದು ಕೊಣ್ಣೂರ, ಡಾ. ಪದ್ಮಜೀತ ನಾಡಗೌಡ ಪಾಟೀಲ, ದ್ರುವ ಜತ್ತಿ ಸೇರಿದಂತೆ ಮುಂತಾದವರು ಆಗಮಿಸಲಿದ್ದಾರೆ.

ಮರುದಿನ ಅ.23 ಗುರುವಾರದಂದು ಅಶೋಕ ಕಾಲನಿಯ ಕುಸ್ತಿ ಮೈದಾನದಲ್ಲಿ 3 ಗಂಟೆಯಿಂದ ರಾಷ್ಟ್ರಮಟ್ಟದ ಜಂಗಿ ನಿಕಾಲಿ ಕುಸ್ತಿಗಳು ಕರ್ನಾಟಕ, ಮಹಾರಾಷ್ಟ್ರದ ಘಟಾನುಘಟಿಗಳಿಂದ ನಡೆಯಲಿವೆ. ಸುಮಾರು 90 ಜೋಡಿಗಳ ಬೃಹತ್ ಕುಸ್ತಿಗಳು ಅಂದು ನಗರದ ಅಶೋಕ ಕಾಲನಿಯಲ್ಲಿನ ಗಣಪತಿ ಗುಡಿಯ ಹತ್ತಿರದ ಮೈದಾನದಲ್ಲಿ ನಡೆಯಲಿದೆ. ಅಂದು ಸಂಜೆ 8 ಗಂಟೆಗೆ ಹಳೆ ಅಂಚೆ ಕಚೇರಿ ಹತ್ತಿರ ನುರಿತ ಗಾಯಕರಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ.

ಜಾತ್ರೆಯ ಕೊನೆಯ ದಿನ ಅ.24 ಶುಕ್ರವಾರದಂದು ಕಳಸೋತ್ಸವ ನಡೆಯಲಿದ್ದು, ಸೋಮವಾರ ಪೇಟೆಯಿಂದ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ. ನಂತರ ರಾತ್ರಿ 8 ಕ್ಕೆ ಸಂಗೀತ ಸುಧೆ ಕಾರ್ಯಕ್ರಮ ಜರುಗಲಿದೆ.

## ಯಮಸಲ್ಲೇಖನ ಸ್ವೀಕರಿಸಿದ ಆರಿಕಾ ಶ್ರೀ 105 ದರ್ಶನಭೂಷಣಮತಿ

**ವರದಿ: ಮಲ್ಲಿಕಾರ್ಜುನ ತುಂಗಳ**

**ರಬಕವಿ–ಬನಹಟ್ಟಿ:** ಜೈನಧರ್ಮದಲ್ಲಿ ಮಾತ್ರ ಸಲ್ಲೇಖನ ಸ್ವಿಕರಿಸುವ ಅನುಮತಿಯಿದೆಯೆಂದು ಇತಿಹಾಸದಿಂದ ತಿಳಿಯುತ್ತೇವೆ. ಅದರಂತೆ ರಬಕವಿ–ಬನಹಟ್ಟಿ ತಾಲೂಕಿನ ಹಳಿಂಗಳಿ ಗ್ರಾಮದ ಭದ್ರಗಿರಿ ಬೆಟ್ಟದಲ್ಲಿ ಶನಿವಾರ ಮಹಾವೀರ ಭಗವಾನದ ಯೋಗ ನಿರೋಧ ದಿನವಾದ ಶನಿವಾರ ಜೈನ ಸಮಾಜದ ಹಿರಿ ಜೀವಿ ಆರಿಕಾ 105 ದರ್ಶನಭೂಷಣಮತಿ ಮಾತಾಜಿಯವರು ಯಮ ಸಲ್ಲೇಖನ ವೃತ ಸ್ವೀಕರಿಸಿ ತಮ್ಮ ಜೀವಿತಾವಧಿಯ ಅಂತಿಮ ದಿನಗಳಿಗೆ ಸಮೀಪಿಸಿದರು.



ಶನಿವಾರ ಬೆಳಿಗ್ಗೆ ಮಾತಾಜಿಯ ಉಸಿರಾಟದಲ್ಲಿ ತೀವ್ರತೆ ಕಂಡುಬಂದಿದ್ದು, ಕಳೆದ 120 ದಿನಗಳ ಹಿಂದೆ ಭದ್ರಗಿರಿ ಬೆಟ್ಟದ ಜೈನ ಮುನಿ ಆಚಾರ್ಯ ಶ್ರೀ 108 ಕುಲರತ್ನಭೂಷಣ ಮಹಾರಾಜರಿಂದ ಸಲ್ಲೇಖನ ವೃತ ಪಡೆದಿದ್ದರು. ಈಗ ಮಾತಾಜಿಯ ಅಂತಿಮ ದಿನಗಳ ಕ್ಷಣಗಣನೆ ಪ್ರಾರಂಭವಾಗಿದ್ದು, ಸಾವಿರಾರು ಭಕ್ತರು ಇವರ ಅಂತಿಮ ಯಾತ್ರೆಯ ಮೋಕ್ಷದ ದರ್ಶನ ಪಡೆಯಲು ಸಾಗರೋಪಾದಿಯಲ್ಲಿ ಬರುತ್ತಿದ್ದಾರೆ.ಮಾತಾಜಿಯವರ ಪಕ್ಕದಲ್ಲಿಯೇ ಕುಳಿತು ಆಚಾರ್ಯ ಶ್ರೀಗಳು ಮಂತ್ರೋಪದೇಶಗಳನ್ನು ಮಾಡುತ್ತಿದ್ದಾರೆ. ಅವರ ಶ್ರೇಷ್ಟ ಆತ್ಮಪರಮಾತ್ಮವಾಗಲಿದೆ. ಅಂತವರ ಅಂತಿಮ ದರ್ಶನ ಪಡೆಯುವುದು ಶ್ರೇಷ್ಟ. ಅವರ 103 ನೇ ವಯೋಮಿತಿಯಲ್ಲಿ ಅವರು ಆರಿಕಾ ಆಗಿ ಜೀವನ ಸಾರ್ಥಕಮಾಡಿಕೊಳ್ಳಬೇಕು ಎಂಬ ಅವರ ಇಚ್ಛೆ ನೆರವೇರಿದೆ. ಅವರ ಆತ್ಮಕ್ಕೆ ಆ ಮಹಾವೀರ ಭಗವಾನರು ಶಾಂತಿ ನೀಡಲಿಯೆಂದು 108 ಶ್ರೀ ಕುಲರತ್ನಭೂಷಣ ಮಹಾರಾಜರು ಆಶೀರ್ವದಿಸಿದರು.

## ಗಾಯನ ಸ್ಪರ್ಧೆಯಲ್ಲಿ ರಾಜ್ಯಕ್ಕೆ ಪ್ರಥಮ: ವಿಜಯಾ ಕೊಲ್ಹಾರಗೆ ಸನ್ಮಾನ



**ವಿಜಯಪುರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಹಿರಿಯ ನಾಗರಿಕರಿಗಾಗಿ ಸಾಂಸ್ಕೃತಿ ಕಾರ್ಯಕ್ರಮದಲ್ಲಿ ಏರ್ಪಡಿಸಿದ್ದ ರಾಜ್ಯ ಮಟ್ಟದ ಗಾಯನ ಸ್ಪರ್ಧೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ವಿಜಯಾ ಕೋಲ್ಹಾರ ಅವರಿಗೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳು ಹಾಗೂ ಸರ್ಕಾರಿ ನಿವೃತ್ತ ನೌಕರರ ಸಂಘ ವತಿಯಿಂದ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಚೇರಿಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ನಿವೃತ್ತ ನೌಕರರ ಸಂಘದ ಅಧ್ಯಕ್ಷರು ಎಸ್. ಪಿ. ಬಿರಾದಾರ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ, ಜಗದೀಶ ಕೆಂಪಲಿಂಗಣ್ಣವರ, ರೇಣುಕಾ ಹುಣಸಗಿಡದ, ಯೋಶದ ಗುಜ್ಜರ, ಎ.ಎಸ್. ನಿಂಬಾಳ, ಮಲ್ಲಿಕಾರ್ಜುನ ಶಿಮಗೊಂಡ ಇತರರು ಉಪಸ್ಥಿತರಿದ್ದರು.

## ಸಮೀಕ್ಷೆಯಿಂದ ಹೊರಗುಳಿದ ಕುಟುಂಬಗಳಿಗೆ ಸಹಾಯವಾಣಿ ಕೇಂದ್ರಗಳ ಆರಂಭ

**ಧಾರವಾಡ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದವತಿಯಿಂದ ಧಾರವಾಡ ಜಿಲ್ಲೆಯಲ್ಲಿ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯ ಮುಕ್ತಾಯದ ಹಂತದಲ್ಲಿದ್ದು, ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿ ಸಮೀಕ್ಷೆಯಿಂದ ಹೊರಗುಳಿದ ಕುಟುಂಬಗಳಿಗೆ ಹಾಗೂ ಸಾರ್ವಜನಿಕರಿಗೆ ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಹಾಗೂ ಸಮೀಕ್ಷೆ ಪೂರ್ಣಗೊಳಿಸಲು ಸಹಾಯವಾಗಲು ಅನುಕೂಲವಾಗುವಂತೆ ತಾಲ್ಲೂಕುವಾರು ಸಹಾಯವಾಣಿ ಕೇಂದ್ರಗಳನ್ನು ಆರಂಭಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆಯುವಂತೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯಲ್ಲಿ ಸಮೀಕ್ಷೆಯಿಂದ ಹೊರಗುಳಿದ ಕುಟುಂಬಗಳು ತಮಗೆ ಸಂಬಂಧಿಸಿದ ತಾಲ್ಲೂಕಿನ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಿದಲ್ಲಿ, ತಕ್ಷಣವೇ ಗಣತಿದಾರರನ್ನು ತಮ್ಮ ಮನೆಗಳಿಗೆ ಸಮೀಕ್ಷೆ ಮಾಡಲು ಕಳುಹಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷಾ ಕಾರ್ಯದಲ್ಲಿ, ಸಮೀಕ್ಷೆಯ ವೆಬ್ ಸೈಟ್ https://kscbcselfdeclaratioin.karnataka.gov.in/ ಮೂಲಕ ಸಾರ್ವಜನಿಕರು ಸಮೀಕ್ಷೆಯಲ್ಲಿ ಭಾಗವಹಿಸಿ ತಮ್ಮ ಕುಟುಂಬಗಳ ಸರ್ವೆ ಕಾರ್ಯದಲ್ಲಿ ಪಾಲ್ಗೊಳ್ಳಬಹುದು. ಮತ್ತು ಸಾರ್ವಜನಿಕರು ಆನ್‌ಲೈನ್‌ನಲ್ಲಿ ಸುಲಭ ವಿಧಾನದಲ್ಲಿ ಸ್ವತಃ ನಿಮ್ಮ ಮೊಬೈಲ್‌ನಲ್ಲಿ ಅರ್ಜಿ ಭರ್ತಿ ಮಾಡಬಹುದು.

ಸಾರ್ವಜನಿಕರು https://kscbcselfdeclaratioin.karnataka.gov.in ವೆಬ್‌ಸೈಟ್‌ಗೆ ಭೇಟಿ ನೀಡಿ, ನಾಗರಿಕ ಎಂದು ಆಯ್ಕೆ ಮಾಡಬೇಕು. ಮೊಬೈಲ್ ನಂಬರ್ ಹಾಕಿ ಓಟಿಪಿ ಪಡೆದು, ನಮೂದಿಸಬೇಕು. ತದನಂತರ ಹೊಸ ಸಮೀಕ್ಷೆ ಆರಂಭಿಸಿ ಎಂದು ಆಯ್ಕೆ ಮಾಡಿ ನಿಮಗೆ ಕೊಟ್ಟಿರುವ ಯುಎಚ್‌ಐಡಿ ಅನ್ನು ನಮೂದಿಸಿ ಪರಿಶೀಲನೆ ಮಾಡಿಕೊಂಡು ಸ್ವತಃ, ಸ್ವಯಂ ಪ್ರೇರಿತವಾಗಿ ಸಮೀಕ್ಷೆಯಲ್ಲಿ ಭಾಗವಹಿಸಬಹುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲಾ ಮತ್ತು ತಾಲ್ಲೂಕು ಸಹಾಯವಾಣಿ ಕೇಂದ್ರಗಳು:ಜಿಲ್ಲಾ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 0836–2447961, ಧಾರವಾಡ ಶಹರ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 0836–2213869, ಧಾರವಾಡ ಗ್ರಾಮೀಣ ಸಹಾಯವಾಣಿ ಕೇಂದ್ರದ ದೂರವಾಣಿಸಂಖ್ಯೆ: 9482959895, ಹುಬ್ಬಳ್ಳಿ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 0836–2213889, ಹುಬ್ಬಳ್ಳಿ ಗ್ರಾಮೀಣ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 8147656306,ಕಲಘಟಗಿ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 9449108069, ಕುಂದಗೋಳ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 9980600193, ನವಲಗುಂದ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ:9008869252, ಅಣ್ಣಿಗೇರಿ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 9945151724, ಅಳ್ನಾವರ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 9008366469 ಗೆ ಕರೆ ಮಾಡಬಹುದು ಎಂದು ಜಿಲ್ಲಾ ಮಟ್ಟದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

# ರಮೇಶ ಕತ್ತಿ ವಿರುದ್ಧ ಕ್ರಮಕ್ಕೆ ಆಗ್ರಹ

**ಗೋಕಾಕ:** ವಾಲ್ಮೀಕಿ ಸಮುದಾಯದ ವಿರುದ್ಧ ಅಶ್ಲೀಲ ಪದ ಬಳಕೆ ಮಾಡಿದ ಮಾಜಿ ಸಂಸದ ರಮೇಶ ಕತ್ತಿ ಅವರ ಮೇಲೆ ಸೂಕ್ತ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಇಲ್ಲಿಯ ವಾಲ್ಮೀಕಿ ಸಮುದಾಯದವರು ತಹಶೀಲದಾರ ಮುಖಾಂತರ ಪೋಲಿಸ್ ಮಹಾನಿರ್ದೇಶಕರಿಗೆ ಸೋಮವಾರದಂದು ಮನವಿ ಸಲ್ಲಿಸಿದರು.

ನಗರದ ಬಸವೇಶ್ವರ ವೃತ್ತದಲ್ಲಿ ಅಪಾರ ಸಂಖ್ಯೆಯಲ್ಲಿ ಸೇರಿದ ವಾಲ್ಮೀಕಿ ಸಮುದಾಯದವರು, ಕರ್ನಾಟಕ ಭೀಮ ರಕ್ಷಕ ಸಂಘಟನೆ, ಹಾಗೂ ದಲಿತ ಪರ ಸಂಘಟನೆಗಳ ಮುಖಂಡರು ಸುಮಾರು ಎರಡು ಗಂಟೆಗೂ ಹೆಚ್ಚು ಕಾಲ ರಸ್ತೆ ತಡೆ ನಡೆಸಿ ಧರಣಿ ನಡೆಸಿದರು. ಮಾಜಿ ಸಂಸದ ರಮೇಶ ಕತ್ತಿ ಅವರ ಪ್ರತಿಕೃತಿ ದಹಿಸಿ, ಟೈರ್‌ಗೆ ಬೆಂಕಿ ಹಚ್ಚಿ ಆಕ್ರೋಷ ವ್ಯಕ್ತಪಡಿಸಿದರು. ವಾಲ್ಮೀಕಿ ಸಮಾಜದ ಮುಖಂಡರಿಗೆ ಇತರೆ ಸಮುದಾಯದ ಮುಖಂಡರುಗಳು ಸಾಥ್ ನೀಡಿ ರಮೇಶ ಕತ್ತಿಯವರ ಹೇಳಿಕೆ ಖಂಡಿಸಿ ಬೀದಿಗಿಳಿದು ಕತ್ತಿಯವರ ಬಂಧನಕ್ಕೆ ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಮುಖಂಡರುಗಳು, ಬೆಳಗಾವಿಯಲ್ಲಿ ಡಿಸಿಸಿ ಬ್ಯಾಂಕ ಚುನಾವಣೆ ಪ್ರಕ್ರೀಯೆಯ ಸಂದರ್ಭದಲ್ಲಿ ಬಿ ಕೆ ಮಾಡಲ್ ಸ್ಕೂಲ್ ಆವರಣದಲ್ಲಿ ಮಾಜಿ ಸಂಸದ ರಮೇಶ ಕತ್ತಿ ಅವರು ವಾಲ್ಮೀಕಿ ಸಮುದಾಯ ವಿರುದ್ಧ ಜಾತಿಯ ಬಗ್ಗೆ ಬೇಡರ ಸೂಳೆ ಮಕ್ಕಳು ಎಂಬ ಅವಾಚ್ಯ ಪದಗಳಿಂದ ಬೈದು ಅವಮಾನಿಸಿದ್ದಾರೆ. ಕತ್ತಿಯವರು ಪದೆ ಪದೆ ದಲಿತರ ಮೇಲೆ ಅವಾಚ್ಯ ಶಬ್ದಗಳಿಂದ ನಿಂಧನೆ ಮಾಡುತ್ತಲೆ ಬಂದಿದ್ದಾರೆ. ದಲಿತರ ಮೇಲಿನ ನಿಂಧನೆ ಅವರ ಕ್ರೂರ ಮನಸ್ಥಿತಿಯನ್ನು ತೋರುತ್ತದೆ. ಸೋಲಿನ ಹತಾಶೆಯಿಂದ ನಿಂಧನೆ ಮಾಡುವ ಇಂತವರಿಗೆ ತಕ್ಕ



ಶಾಸ್ತಿಯಾಗಬೇಕಿದೆ. ಈ ನಿಂಧನೆಯಿಂದ ಜಿಲ್ಲೆಯ ಹಾಗೂ ರಾಜ್ಯದ 60ಲಕ್ಷ ವಾಲ್ಮೀಕಿ ಸಮುದಾಯದ ಜನರ ಮನಸ್ಸಿಗೆ ಹಾಗೂ ದಲಿತಪರ ಸಂಘಟನೆಗಳಿಗೆ ತೀವ್ರ ಗಾಸಿ ಉಂಟು ಮಾಡಿದೆ.

ಇದು ಘೋರ ಅಪರಾಧವಾಗಿದ್ದು ಇವರ ಮೇಲೆ ಸೂಕ್ತ ಕಠಿಣ ಕ್ರಮಕೈಗೊಳ್ಳುವಂತೆ ವಿನಂತಿಸಿದರು.

ಪ್ರತಿಭಟನೆಯಲ್ಲಿ ಸುರೇಶ ಸನದಿ, ಕೆಂಪಣ್ಣ ಮೈಲನ್ನವರ, ಹನಮಂತ ದುರ್ಗನ್ನವರ, ಭೀಮಶಿ ಭರಮನ್ನವರ, ಬಸವರಾಜ ಸಾಯನ್ನವರ, ಈಶ್ವರ ಗುಡಜ, ದೀಪಕ ಕೋಟಬಾಗಿ, ಅಶೋಕ ಕುಮಾರನಾಯ್ಕ, ಬೋರಪ್ಪ ಬಂಗೆನ್ನವರ, ಗುರುಪಾದ ತವಗೇರಿ, ಸುರೇಶ ಕಾಮೇವಾಡಿ, ಪ್ರಕಾಶ ಕರನಿಂಗ, ವಿನೋದ ಕರನಿಂಗ, ಧನ್ಯಕುಮಾರ ಮೇಗೇರಿ, ಬಸವರಾಜ ಬೇಡರಟ್ಟಿ, ಫಕೀರವ್ವ ನವನಿ, ಮಹಾನಿಂಗ ಬುರಾಣಿ, ರಾಜು ಪಾತ್ರೂಟ, ಮೂದಲಿಂಗ ಗೋರಬಾಳ, ಬಾಳೇಶ ಹುಳಿಸಂಗಟಿ, ಸುನೀಲ ಗಡ್ಡಿಹೊಳಿ, ಗೋವಿಂಗ ಕಳ್ಳಿಮನಿ, ಬೀರಪ್ಪ ಮೈಲನ್ನವರ, ಸಿದ್ದಪ್ಪ ದೇಸಾಯಿ, ಸುನೀತಾ ಕೊಳವಿ, ಸುನೀತಾ ಕೊಣ್ಣೂರ, ರೂಪಾ ಶಾಬಂದರೆ ಸೇರಿದಂತೆ ಅನೇಕರು ಇದ್ದರು.

# ಹುಬ್ಬಳ್ಳಿಯಲ್ಲಿ ಪಿಎನ್‌ರಾವ್ ಬ್ರ್ಯಾಂಡ್ ಉದ್ಘಾಟನೆ



**ಹುಬ್ಬಳ್ಳಿ:** ಹುಬ್ಬಳ್ಳಿಯಲ್ಲಿ ತನ್ನ ಮೊದಲ ಅಂಗಡಿ ಆರಂಭಿಸುವ ಮೂಲಕ ಪಿ ಎನ್‌ರಾವ್ ಹೊಸ ಮೈಲಿಗಲ್ಲು ಸ್ಥಾಪಿಸಿದ್ದು, ಕರ್ನಾಟಕದಲ್ಲಿತನ್ನ ಅಸ್ತಿತ್ವವನ್ನು ವಿಸ್ತರಿಸಿದೆ. ಈ ಅಂಗಡಿಯಉದ್ಘಾಟನೆಯನ್ನು ವಿ.ಆರ್.ಎಲ್ ಲಾಜಿಸ್ಟಿಕ್ಸ್ ನ ಸ್ಥಾಪಕ ಆನಂದ ಸಂಕೇಶ್ವರ್ ನೆರವೇರಿಸಿದರು.

1923ರಲ್ಲಿ ಸ್ಥಾಪನೆಯಾದ ಪಿ.ಎನ್.ರಾವ್ ಕ್ಲಾಸಿಕ್ ಟೈಲರಿಂಗ್ ಮತ್ತು ಸಮಕಾಲೀನ ಶೈಲಿಯ ಮಿಶ್ರಣಕ್ಕೆ ಹೆಸರುವಾಸಿಯಾಗಿದೆ. ಬಟ್ಟೆ ಮತ್ತು, ಬೆಸ್ಪೋಕ್‌ಟೈಲರಿಂಗ್ ಸೇವೆಗಳ ಜೊತೆಗೆ ವ್ಯಾಪಕ ಶ್ರೇಣಿಯ ಸಿದ್ಧ-ಧರಿಸುವ ಔಪಚಾರಿಕ ಸಮಾರಂಭ ಮತ್ತುಜನಾಂಗೀಯ ಉಡುಗೆಗಳನ್ನು ಪೂರೈಸುತ್ತದೆ. ಹೊಸ ಅಂಗಡಿಯಆರಂಭದೊಂದಿಗೆ ಈ ಬ್ರ್ಯಾಂಡ್‌ತನ್ನಗುಣಮಟ್ಟ, ಸೊಬಗು ಮತ್ತು ಸೇವೆಯ ಪರಂಪರೆಯನ್ನು ಹುಬ್ಬಳ್ಳಿಗೆ ಪರಿಚಯಿಸಿದೆ.ಪಿ ಎನ್‌ರಾವ್ ನ ಪಾಲುದಾರು ಕೇತನ್ ಪಿಶೆ ಮಾತನಾಡಿ, "ಆಳವಾದ ಸಾಂಸ್ಕೃತಿಕ ಬೇರುಗಳು ಮತ್ತು ಪ್ರೀಮಿಯಂ ಫ್ಯಾಷನ್ನಾಗಿ ಹೆಸರುವಾಸಿಯಾಗಿರುವ ಪಿ ಎನ್‌ರಾವ್‌ಅನ್ನು ಹುಬ್ಬಳ್ಳಿ ನಗರಕ್ಕೆತರಲು ನಾವು ರೋಮಾಂಚನಗೊಂಡಿದ್ದೇವೆ. ಕರ್ನಾಟಕದಾದ್ಯಂತ ವಿವೇಚನಾಶೀಲ ಗ್ರಾಹಕರಿಗೆಕಾಲಾತೀತ ಸೊಬಗು ಮತ್ತು ಪರಿಪೂರ್ಣ ಸೇವೆಯನ್ನುತಲುಪಿಸುವ ನಮ್ಮ ಬದ್ಧತೆಯನ್ನು ನಮ್ಮ ಬ್ರ್ಯಾಂಡ್ ಪ್ರತಿನಿಧಿ ಸುತ್ತದೆ" ಎಂದು ಹೇಳಿದರು.

ಪಿ ಎನ್‌ರಾವ್ ಪಾಲುದಾರ ನವೀನ್ ಪಿಶೆ ಮಾತನಾಡಿ, "ಹುಬ್ಬಳ್ಳಿ ವೇಗವಾಗಿ ವಿಕಸನಗೊಳ್ಳುತ್ತಿರುವ ಮಾರುಕಟ್ಟೆಯಾಗಿದೆ. ಈ ಅಂಗಡಿಯಉದ್ಘಾಟನೆಯೊಂದಿಗೆ, ಶೈಲಿ, ಗುಣಮಟ್ಟ ಮತ್ತು ಪ್ರತ್ಯೇಕತೆಗೌರವಿಸುವ ಪುರುಷರಿಗೆ ವಿಶ್ವದರ್ಜೆಯ ಶಾಪಿಂಗ್‌ಅನುಭವಒದಗಿಸುವಗುರಿಯನ್ನು ನಾವು ಹೊಂದಿ ದ್ದೇವೆ" ಎಂದು ಹೇಳಿದರು.ಈ ಸಂದರ್ಭದಲ್ಲಿ ಸೆಲೆಬ್ರಿಟಿಯಾಗಿಖ್ಯಾತ ನಟ ಮತ್ತು ಟಿವಿ ನಿರೂಪಕ ಅಕುಲ್ ಬಾಲಾಜಿ ಅವರು ಅಂಗಡಿಗೆ ಭೇಟಿ ನೀಡಿ ಅಭಿಮಾನಿಗಳೊಂದಿಗೆ ಆತ್ಮೀಯವಾಗಿ ತೊಡಗಿಸಿಕೊಂಡರಲ್ಲದೇ, ಮತ್ತು ಬ್ರ್ಯಾಂಡ್ನಇತ್ತೀಚಿನ ಸಿದ್ಧ-ಸಿದ್ಧ ಸಂಗ್ರಹಗಳನ್ನು ಅನ್ವೇಷಿಸಿದರು. ಅಕುಲ್ ಸಿಗ್ನೇಚರ್ ಪಿ ಎನ್‌ರಾವ್ ಸೂಟ್ನಲ್ಲಿ ಆಗಮಿಸಿದರು ಮತ್ತುಎರಡು ಹೆಚ್ಚುವರಿ ಉಡುಪುಗಳನ್ನು ಧರಿಸಲು ಸಮಯತೆಗೆದುಕೊಂಡರು. ಈ ಮೂಲಕ ಬ್ರ್ಯಾಂಡ ಸೂಕ್ಷ್ಮಕರಕುಶಲತೆಯ ನೋಟವನ್ನು ಪ್ರದರ್ಶಿಸಿದರು. ಬ್ರ್ಯಾಂಡ್ನ ಮಾಸ್ಟರ್‌ಟೈಲರ್ ನಡೆಸುವ ಬಟ್ಟೆಯಆಯ್ಕೆ ಮತ್ತು ನಿಖರವಾದದೇಹದ ಅಳತೆಗಳು ಸೇರಿದಂತೆಕಸ್ಟಮ್‌ಟೈಲರಿಂಗ್ ಪ್ರಕ್ರಿಯೆಯನ್ನು ನೇರವಾಗಿ ಅನುಭವಿಸಿದರು ಹುಬ್ಬಳ್ಳಿ ಅಂಗಡಿಯಉದ್ಘಾಟನೆಯು ಪಿ ಎನ್‌ರಾವ್ ನ ವಿಸ್ತರಣೆಯ ಮತ್ತೊಂದು ಪ್ರಮುಖ ಹೆಜ್ಜೆಯಾಗಿದೆ. ಈ ಮೂಲಕ ಕರ್ನಾಟಕದಾದ್ಯಂತ ಹೆಚ್ಚಿನಗ್ರಾಹಕರಿಗೆತನ್ನ ಪರಂಪರೆ ಮತ್ತು ಸಂಸ್ಕರಿಸಿದ ಫ್ಯಾಷನ್‌ಅನ್ನು ಪರಿಚಯಿಸುವುದ ಮುಂದುವರೆಸಿದೆ.

### ಬೆಳಗಾವಿ ಡಿಸಿಸಿ ಬ್ಯಾಂಕ ಚುನಾವಣೆ
## ಅಪ್ಪಾಸಾಬ ಕೂಲಿಗುಡೆ ನಿರ್ದೇಶಕರಾಗಿ ಆಯ್ಕೆ



**ಬೆಳಗಾವಿ:** ಪ್ರತಿಷ್ಠಿತ ದಿ ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕನಿ ಬೆಳಗಾವಿ ರವಿವಾರದಂದು ನಡೆದ ಚುನಾವಣೆಯಲ್ಲಿ ರಾಯಬಾಗ ತಾಲುಕು ಮತಕ್ಷೇತ್ರದಿಂದ ಸ್ಪರ್ಧೆ ಮಾಡಿ ಅಯ್ಕೆಯಾದ ಅಪ್ಪಾಸಾಬ ಕೂಲಿಗುಡೆ ಅವರು ಲೋಕೋಪಯೋಗಿ ಇಲಾಖೆ ಮತ್ತು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಹಾಗೂ ಅರಬಾಂವಿ ಶಾಸಕರಾದ ಬಾಲಚಂದ್ರ ಜಾರಕಿಹೊಳಿ ಅವರ ಸಹಕಾರದಿಂದ ನಿರ್ದೇಶಕರಾಗಿ ಅಯ್ಕೆಯಾದ ಸಮಾಜದ ಹೆಮ್ಮೆಯ ಸಹಕಾರಿ ದುರೀಣರಾದ ಅಪ್ಪಾಸಾಬ ಕುಲಗುಡೆಯವರು ನಿರ್ದೇಶಕರಾಗಿ ವಿಜಯಶಾಲಿಯಾಗಿದ್ದಕ್ಕೆ ಸಮಾಜಕ್ಕೆ ಕೀರ್ತಿ ತಂದಿದ್ದಾರೆ. ಅಪ್ಪಾಸಾಬ ಕೂಲಿಗುಡೆ ಅವರಿಗೆ ಮಾಳಿ ಮಾಲಗಾರ ಸಮಾಜದ ಮುಖಂಡರು ಅಭಿನಂದನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾಳಿ ಮಾಲಗಾರ ಸಮಾಜದ ರಾಜ್ಯಾಧ್ಯಕ್ಷ ಕಾಡು ಮಾಳಿ.ಮುಖಂಡರಾದ ಸಿ ಬಿ ಕೂಲಿಗೋಡ.ಸದಾಶಿವ ಬುಟಾಳಿ. ನೀಲಪ್ಪ ಕಿವಟಿ. ಸಂಜು ಅಥಣಿ. ಮುರಿಗೆಪ್ಪ ಮಾಲಗಾರ.ಮಾದೇವ ತೆರದಾಳ.ಸದಾಶಿವ ಹೊಸಮನಿ. ಕೃಷ್ಣಾ ಮಾಳಿ.ಸೇರಿದಂತೆ ಅನೇಕರು ಭಾಗವಹಿಸಿದ್ದರು.

### ಜೀವನ ಗೌರವ, ಆದರ್ಶ ಶಿಕ್ಷಕ ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಪ್ರೊ.ಡಾ ಚಂದ್ರಕಾಂತ ವಾಘಮಾರೆ ಅಭಿಪ್ರಾಯ
## ಶಿಕ್ಷಕರು ಕಲಿಕಾ ಸ್ಫೂರ್ತಿ ತುಂಬುವವರಾಗಬೇಕು

**ಮಾರಿಹಾಳ (ಬೆಳಗಾವಿ):** ಪ್ರತಿಷ್ಠಾನ ಸ್ಥಾಪಿಸಿ ತನ್ಮೂಲಕ ಶೈಕ್ಷಣಿಕ ಕ್ಷೇತ್ರದ ಸಾಧಕರನ್ನು ಗುರುತಿಸಿ ಸಮಾಜಕ್ಕೆ ಪರಿಚಯಿಸುವ ದಿ.ನಾಗಪ್ಪ ಮಿಸಾಳೆ ಪ್ರತಿಷ್ಠಾನದ ಕಾರ್ಯ ಅತ್ಯಂತ ಶ್ಲಾಘನೀಯ ಎಂದು ಬೆಳಗಾವಿ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಪ್ರೊ.ಡಾ ಚಂದ್ರಕಾಂತ ವಾಘಮಾರೆ ಹೇಳಿದರು.

ಅವರು ಭಾನುವಾರ ಮಾರಿಹಾಳ ಗ್ರಾಮದಲ್ಲಿ ನಾಗಪ್ಪಾ ಮಿಸಾಳೆ ಪ್ರತಿಷ್ಠಾನದಿಂದ ಜೀವನ ಗೌರವ ಪುರಸ್ಕಾರ ಹಾಗೂ ಆದರ್ಶ ಶಿಕ್ಷಕ ಪ್ರಶಸ್ತಿ ವಿತರಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಶಿಕ್ಷಕರು ಅಕ್ಷರ ತುಂಬುವ ಶಿಕ್ಷಕರಾಗದೇ ಕಲಿಕಾ ಸ್ಫೂರ್ತಿ ತುಂಬುವ ಶಿಕ್ಷಕರಾಗಬೇಕು. ನಮ್ಮ ಬದುಕಿಗೆ ಬೆಳಕು ನೀಡುವ ಗುರು ಎಂದೆಂದೂ ಪೂಜನೀಯ. ಈ ಸ್ಥಾನಕ್ಕೆ ಸಮವಾದದ್ದು ಬೇರೆಲ್ಲೂ ಸಿಗದು. ಪ್ರಶಸ್ತಿ ಅರಸಿ ಬರುವ ಶಿಕ್ಷಕರಾಗಬೇಕೇ ವಿನಹ ಶಿಕ್ಷಕರು ಪ್ರಶಸ್ತಿ ಅರಸುವದಾಗಬಾರದು ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಗೋವಾದ ಸಾಕಳಿ ಸರ್ಕಾರಿ ಕಾಲೇಜಿನ ನಿವೃತ್ತ ಉಪಪ್ರಾಚಾರ್ಯ ಡಾ.ಕೃಷ್ಣಾ ಬಡಿಗೇರ ಮಾತನಾಡಿ, ಜಗತ್ತಿನ ಬಹುತೇಕ ಸಾಧಕರಲ್ಲಿ ಶಿಕ್ಷಕರನ್ನೇ ಕಾಣಬಹುದು. ಬಲಿಷ್ಟ ರಾಷ್ಟ್ರನಿರ್ಮಾಣ ಕೂಡ ಪರಿಪೂರ್ಣ ಮತ್ತು



ಶ್ರೇಷ್ಟ ಶಿಕ್ಷಕರಿಂದ ಮಾತ್ರ ಸಾಧ್ಯ. ಅಂಥ ಶ್ರೇಷ್ಠ ಶಿಕ್ಷಕರಾಗಿ ನಾಡು ಬೆಳಗಿದ ಗುರು ದಿ. ನಾಗಪ್ಪ ಅವರಾಗಿದ್ದಾರೆ ಎಂದು ಹೇಳಿದರು.

ಅತಿಥಿಯಾಗಿದ್ದ ಡಾ ಗಜಾನನ ನಾಯ್ಕ ಪ್ರತಿಷ್ಠಾನದ ಕಾರ್ಯವನ್ನು ಶ್ಲಾಘಿಸಿದರು. ಶಿಕ್ಷಕರಾದ ಪ್ರಭುನಗರದ ಶುಭಾ ಎಂ. ಭಟ್, ವಡಗಾವಿಯ ಸುಶೀಲಾ ಗುರವ, ಜನೇವಾಡಿಯ ಖಂಡು ಪಾಟೀಲ, ಬೆಳಗಾವಿಯ ಕವಿತಾ ಪರಮಾಣಿಕ, ಗೌಂಡವಾಡದ ಗಜಾನನ ಧಾಮಣೇಕರ ಆದರ್ಶ ಶಿಕ್ಷಕ ಪ್ರಶಸ್ತಿ ಪಡೆದರು. ಪರಶುರಾಮ ಬಾವು ನಂದಿಹಳ್ಳಿ, ಮನೋಹರ ಪಾಟೀಲ ಅವರಿಗೆ ಜೀವನ ಗೌರವ ನೀಡಲಾಯಿತು.

ರಮೇಶ ಮಿಸಾಳೆ ಅಧ್ಯಕ್ಷತೆ ವಹಿಸಿದ್ದರು. ಡಾ ಡಿ ಎನ್ ಮಿಸಾಳೆ ಸ್ವಾಗತಿಸಿ, ಪ್ರಸ್ತಾವಿಕ ಮಾತನಾಡಿದರು. ವಿಷ್ಣುಪಂತ ಮಿಸಾಳೆ, ಕೃಷ್ಣಾ ಮಿಸಾಳೆ, ಗೋವಿಂದ ಮಿಸಾಳೆ, ಪ್ರಣೀಲ ಸಿದ್ಧೇಶ ಮಿಸಾಳೆ, ಸರೋಜಾ ದಳವಿ, ಶಾಮಲಾ ದಳವಿ, ವಿಜಯ ದಳವಿ, ಅಜೇಯ ದಳವಿ, ಸೇರಿದಂತೆ ಅಪಾರ ಶಿಕ್ಷಣ ಪ್ರೇಮಿಗಳು ಉಪಸ್ಥಿತರಿದ್ದರು.

ರಾಜೇಶ ಸೊಗಲಿ, ಗೋವಿಂದ ಮಿಸಾಳೆ ನಿರೂಪಿಸಿದರು. ಸಿದ್ಧಾರ್ಥ ಮಿಸಾಳೆ ವಂದಿಸಿದರು.

## ದೇಶಾಭಿಮಾನ ಮೂಡಿಸಿದ ಪಥ ಸಂಚಲನ

**ರಬಕವಿ-ಬನಹಟ್ಟಿ:** ನಗರದಲ್ಲಿ ಭಾನುವಾರ ಮಧ್ಯಾಹ್ನ ಆರ್‌ಎಸ್‌ಎಸ್ ಸ್ವಯಃ ಸೇವಕ ಸಂಘದ ಶತಾಬ್ದಿ ವರ್ಷದ ಅಂಗವಾಗಿ ಆಕರ್ಷಕ ಪಥ ಸಂಚಲನ ನಡೆಯಿತು.

ನಗರದ ಹಳೆ ನೀರಿನ ಟ್ಯಾಂಕ್ ಹತ್ತಿರದ ಚೌಡಯ್ಯ ಸರ್ಕಲ್ ನಿಂದ ಆರಂಭಗೊಂಡ ಪಥ ಸಂಚಲನವು ನಾಮದೇವ ಗಲ್ಲಿ, ಸೋಮವಾರ ಪೇಠೆಯ ಪ್ರಮುಖ ಬೀದಿ, ವೀರಭದ್ರೇಶ್ವರ ದೇವಸ್ಥಾನದ ಮಾರ್ಗ, ಗಾಂಧಿ ವೃತ್ತ, ಮಂಗಳವಾರ ಪೇಟೆ ಮತ್ತು ತಮ್ಮಣ್ಣಪ್ಪ ಚಿಕ್ಕೋಡಿ ಮಾರ್ಗದ ಮೂಲಕ ಎಸ್ ಆರ್ ಎ ಮೈದಾನದಲ್ಲಿ ಮುಕ್ತಾಯಗೊಂಡಿತು. ಪ ' ಥ ' ಸಂಚಲನದ ಮಾರ್ಗದಲ್ಲಿ ರಸ್ತೆಯ ಬದಿಗೆ ನಿಂತ ಜನರು ಗಣವೇಷಧಾರಿಗಳಿಗೆ ಹೂವಿನ ಮಳೆಗೈದರು. ಭಾರತ ಮಾತಾಕೀ ಜೈ, ಹರ ಹರ ಮಹಾದೇವ, ಜೈ ಶ್ರೀರಾಮ ಘೋಷಣೆಗಳು ರೋಮಾಂಚನಗೊಳಿಸಿದವು. ಮಾರ್ಗದ ಪ್ರಮುಖ ಸ್ಥಳಗಳಲ್ಲಿ ರಾಷ್ಟ್ರ ನಾಯಕರ ಛದ್ಮ ವೇಷಧಾರಿ ಮಕ್ಕಳು ಗಮನ ಸೆಳೆದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ, ಮೂರು ಜನ ಡಿವೈಎಸ್ಪಿ, ಆರು ಜನ ಸಿಪಿಐ ಸೇರಿದಂತೆ ನಾಲ್ಕು ನೂರು ಜನ ಪೊಲೀಸ್ ರನ್ನು ಬಂದೋಬಸ್ತಿಯಾಗಿ ಆಯೋಜನೆ ಮಾಡಲಾಗಿತ್ತು.



## ಅ.28ರಂದು ಶ್ರೀ ದುರ್ಗಾದೇವಿ ಮಂದಿರಕ್ಕೆ ಕಳಸಾರ್ಪಣೆ

**ತಾಳಿಕೋಟೆ:** ಪಟ್ಟಣದ ಮಾದರ ಚೆನ್ನಯ್ಯ ಬಡಾವಣೆಯಲ್ಲಿರುವ ಶ್ರೀ ದುರ್ಗಾದೇವಿ ಮಂದಿರದ ನೂತನ ಕಳಸಾರೋಹಣಕ್ಕಾಗಿ ಸಮಾಜದವರ ಅಪೇಕ್ಷೆಯ ಮೇರೆಗೆ ತಾಳಿಕೋಟೆ ಪುರಸಭೆಯ ಮಾಜಿ ಅಧ್ಯಕ್ಷರಾದ ಧಶರಥ್‌ಸಿಂಗ್ ಮನಗೂಳಿ ಅವರು ಇದೇ ದಿ.28 ರಂದು ಜರುಗಲಿರುವ ಶ್ರೀ ದುರ್ಗಾದೇವಿಯ ಮಹಾಭಿಷೇಕ ಉತ್ಸವದಿನದಂದು ಶ್ರೀ ದೇವಿಯ ಮಂದಿರಕ್ಕಾಗಿ ಸಮಾಜದವರ ಅಪೇಕ್ಷೆಯ ಮೇರೆಗೆ ಧಶರಥ್‌ಸಿಂಗ್ ಅವರು ತರಲಾದ 4 ಅಡಿ ಎತ್ತರದ 25 ಕೀಲೋ ತೂಕದ ಹಿತ್ತಾಳೆಯ ಕಳಸವನ್ನು ದಶರಥ್‌ಸಿಂಗ್ ಮನಗೂಳಿ ಅವರು ಶ್ರೀ ದೇವಿಯ ಮಂದಿರಕ್ಕೆ ಅರ್ಪಿಸಲಿದ್ದಾರೆ.

ಸದರಿ ದಿನದಂದು ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ ಭಕ್ತಿದಾಯಕ ಹಾಡುಗಳು ಜರುಗುವುದಲ್ಲದೇ ನಂತರ ಸಮಸ್ತ ಭಕ್ತಾಧಿಗಳಿಗೆ ಮಹಾ ಪ್ರಸಾದ ಜರುಗುವದು ಕಾರಣ ಭಕ್ತಾಧಿಗಳು ಸದರಿ ಉತ್ಸವದಲ್ಲಿ ಪಾಲ್ಗೊಂಡು ಶ್ರೀ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಮಾದರ ಸಮಾಜದ ಹಿರಿಯರಾದ ಯಮನಪ್ಪ ಕಟ್ಟಿಮನಿ ಅವರು ತಿಳಿಸಿದ್ದಾರೆ.

## ದಾನಮ್ಮ ದೊಡ್ಡಮನಿ ರಾಜ್ಯಮಟ್ಟಕ್ಕೆ ಆಯ್ಕೆ

**ಮುದ್ದೇಬಿಹಾಳ:** ತಾಲ್ಲೂಕಿನ ಬಸರಕೋಡದ ಸರಕಾರಿ ಪಪೂ ಕಾಲೇಜಿನ ವಿದ್ಯಾರ್ಥಿನಿ ದಾನಮ್ಮ ದೊಡ್ಡಮನಿ ಜಿಲ್ಲಾ ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ ವೈಯಕ್ತಿಕ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಹಾಗೂ ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ ಎಂದು ಪ್ರಾಚಾರ್ಯ ಎಸ್.ಎಂ.ಕಮತರ ತಿಳಿಸಿದ್ದಾರೆ.



## ಮುಂದಿನ ವರ್ಷ 200 ಮೆಡಿಕಲ್ ಸೀಟ್ ಆಯ್ಕೆಯ ಗುರಿ

**ಮುದ್ದೇಬಿಹಾಳ:** ಉತ್ತರ ಕರ್ನಾಟಕ ಭಾಗದಲ್ಲಿ ಅತೀ ಹೆಚ್ಚು ಮೆಡಿಕಲ್ ಸೀಟುಗಳನ್ನು ಪಡೆದುಕೊಳ್ಳುವಲ್ಲಿ ಹಿರಿಮೆ ಸಾಧಿಸಿರುವ ನಮ್ಮ ಸಂಸ್ಥೆಯಿಂದ ಮುಂದಿನ ವರ್ಷ 200 ವಿದ್ಯಾರ್ಥಿಗಳು ಎಂ.ಬಿ.ಬಿ.ಎಸ್ ಸೀಟು ಪಡೆದುಕೊಳ್ಳುವಲ್ಲಿ ಯಶ ಕಾಣುವ ವಿಶ್ವಾಸ ಇದೆ ಎಂದು ಆಕ್ಸಫರ್ಡ ಪಾಟೀಲ್ಸ್ ಸಮೂಹ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಅಮಿತಗೌಡ ಪಾಟೀಲ ಹೇಳಿದರು.




ತಾಲ್ಲೂಕು ನಾಗರಬೆಟ್ಟದ ಆಕ್ಸಫರ್ಡ್ ಪಾಟೀಲ್ಸ್ ಪಿಯು ಸೈನ್ಸ್ ಕಾಲೇಜಿನಲ್ಲಿ ಭಾನವಾರ 2025ನೇ ಸಾಲಿನಲ್ಲಿ 187 ಮೆಡಿಕಲ್ ಸೀಟು ಪಡೆದುಕೊಂಡ 187 ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದ ಅವರು ಗುಣಮಟ್ಟದ ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಲಾಗುತ್ತದೆ ವಿದ್ಯಾರ್ಥಿಗಳ ಏಳ್ಗೆಗಾಗಿ ಸಂಸ್ಥೆಯಿಂದ ಶಿಕ್ಷಕರು, ಉಪನ್ಯಾಸಕರು ಅಗತ್ಯ ಮಾರ್ಗದರ್ಶನ ಮಾಡಲಿದ್ದು ನಮ್ಮ ಸಂಸ್ಥೆಯಿಂದ ಈಗಾಗಲೇ 1200ಕ್ಕೂ ಹೆಚ್ಚು ಎಂ.ಬಿ.ಬಿ.ಎಸ್., 1800ಕ್ಕೂ ಹೆಚ್ಚು ಬಿಎಎಂಎಸ್, 400ಕ್ಕೂ ಹೆಚ್ಚು ಪಶುವೈದ್ಯಕೀಯ ವಿದ್ಯಾಭ್ಯಾಸಕ್ಕೆ ವಿದ್ಯಾರ್ಥಿಗಳು ಅರ್ಹತೆ ಪಡೆದುಕೊಂಡಿದ್ದಾರೆ ವಿಶೇಷವಾಗಿ ವೈದ್ಯಕೀಯ ಕೋರ್ಸಿಗೆ ಸೇರಲು ಅಗತ್ಯ ತರಬೇತಿ ನೀಡಲಾಗುತ್ತದೆ ಎಂದರು.

ಸರ್ಕಾರಿ ಆಸ್ಪತ್ರೆಯ ಚಿಕ್ಕಮಕ್ಕಳ ವೈದ್ಯ ಡಾ.ಪರಶುರಾಮ ವಡ್ಡರ ಮಾತನಾಡಿ ಎಂಬಿಬಿಎಸ್ ಎಂ.ಡಿ ಓದಲು ಅಡಿಪಾಯ ಎರಡು ವರ್ಷ ಚೆನ್ನಾಗಿ ಓದಬೇಕು ತಂದೆ ತಾಯಿ, ಪಾಲಕರು ಕಷ್ಟಪಟ್ಟು ಓದಿಸಲು ಕಳಿಸಿರುವಾಗ ಅದನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಚಿರ್ಚನಕಲ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಶಿಕ್ಷಕ ಟಿ.ಡಿ.ಲಮಾಣಿ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ವೈದ್ಯರಾಗುವ ಕನಸಿಗೆ ನೀರೆರೆದು ಪೋಷಿಸುವ ಕೆಲಸ ಆಕ್ಸಫರ್ಡ್ ಸಮೂಹ ಶಿಕ್ಷಣ ಸಂಸ್ಥೆಯಿಂದ ಮಾಡಲಾಗುತ್ತಿದ್ದು ಇಲ್ಲಿಯ ತರಬೇತಿ ಉತ್ತಮವಾಗಿದೆ ಎಂದರು.

ಶಿಕ್ಷಕ ಸಂಗಮೇಶ ಹೂಗಾರ, ಆಕ್ಸಫರ್ಡ ಆಂಗ್ಲಮಾಧ್ಯಮ ಪ್ರೌಢಶಾಲೆ ಮುಖ್ಯಗುರು ಇಸ್ಮಾಯಿಲ ಮನಿಯಾರ, ಕರೇಕಲ್ ಪಾಟೀಲ್ ಆಸ್ಪತ್ರೆಯ ವೈದ್ಯ ಡಾ.ಬಸನಗೌಡ ಕರೇಕಲ್ಲ ಪಾಟೀಲ, ಬಿರಾದಾರ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆ ವೈದ್ಯ ಡಾ. ವಿಜಯಶೇಖರ ಬಿರಾದಾರ ಮಾತನಾಡಿದರು.

ಡಾ.ಎಸ್.ಬಿ.ಗಂಗನಗೌಡರ, ರಾಜಶೇಖರ ಹಿರೇಮಠ, ರೇವಣಸಿದ್ದ ಮುರಾಳ, ಕೆ.ಎಸ್.ಚಟ್ಟಿ, ಎನ್.ಎ.ಬಿರಾಜದಾರ, ಮಂಜುನಾಥ ಮಂಕಣಿ, ಮೊದಲಾದವರು ಇದ್ದರು.

## ಇಂದು ಪೋಲೀಸ್ ಹುತಾತ್ಮರ ದಿನಾಚರಣೆ

**ಕಾರವಾರ:** ಉತ್ತರ ಕನ್ನಡ ಜಿಲ್ಲಾ ಪೊಲೀಸ್ ಇಲಾಖೆವತಿಯಿಂದ ಪೊಲೀಸ್ ಹುತಾತ್ಮರ ದಿನಾಚರಣೆಯನ್ನು ಅಕ್ಟೋಬರ್ 21 ರಂದು ಬೆಳಗ್ಗೆ 8 ಗಂಟೆಗೆ ಪೊಲೀಸ್ ಕವಾಯತು ಮೈದಾನ ಕಾರವಾರದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪ್ರಭಾರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಾಯಣ್ಣ ಬಿ.ಎಲ್, ಗೌರವ ಅತಿಥಿಗಳಾಗಿ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ವಿಶೇಷ ಅತಿಥಿಗಳಾಗಿ ಕೆನರಾ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ.ಹೀರಾಲಾಲ್ ಭಾಗವಹಿಸಲಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್. ತಿಳಿಸಿದ್ದಾರೆ.

## ನೆಮ್ಮದಿಯ ಜೀವನಕ್ಕೆ ಆಧ್ಯಾತ್ಮ ಅವಶ್ಯ



**ಮಹಾಲಿಂಗಪುರ:** ಮನುಷ್ಯನ ನೆಮ್ಮದಿಯ ಜೀವನಕ್ಕೆ ಸತ್ಸಂಗ ಮತ್ತು ಅಧ್ಯಾತ್ಮ ಅವಶ್ಯವಾಗಿದೆ ಎಂದು ಹುಬ್ಬಳ್ಳಿಯ ಬಾಳಪ್ಪ ಮಹಾರಾಜರು ಹೇಳಿದರು.

ಪಟ್ಟಣದ ಇಂಚಗೇರಿ ಸಂಪ್ರದಾಯದ ಅರ್ಜುನ ಸಣ್ಣಕ್ಕಿ ಪರಿವಾರ ಹಮ್ಮಿಕೊಂಡಿದ್ದ ಮಾಧವಾನಂದರ ಸಪ್ತಾಹ ಮತ್ತು ಮಹಾಲಕ್ಷ್ಮೀ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಹಣ, ಅಂತಸ್ತು, ಅಧಿಕಾರಕ್ಕಿಂತ ಸತ್ಸಂಗ, ಅಧ್ಯಾತ್ಮ, ಭಜನೆ, ಕೀರ್ತನೆ, ದಾಸೋಹ, ಭಗವಂತನ ನಾಮಸ್ಮರಣೆಯಲ್ಲಿ ಮಾತ್ರ ಶಾಶ್ವತ ಸುಖ ಸಾಧ್ಯ. ಈ ನಿಟ್ಟಿನಲ್ಲಿ ಅರ್ಜುನ ಸಣ್ಣಕ್ಕಿ ಮಹಾರಾಜರ ಜ್ಞಾನ ದಾಸೋಹ, ಅನ್ನದಾಸೋಹ ಶ್ಲಾಘನೀಯ ಎಂದರು.

ಖೋಜನವಾಡಿಯ ಗಿರೀಶ ಮಹಾರಾಜರು, ವೆಂಕಟಾಪೂರದ ಸತ್ಯೆಪ್ಪ ಮಹಾರಾಜರು, ಕಂಕವಾಡಿಯ ಮಾರುತಿ ಶರಣರು, ನಾಗರಾಳದ ಯಲ್ಲನಗೌಡ ಪಾಟೀಲ ಮಹಾರಾಜರು, ಕೆಸರಗೊಪ್ಪದ ಧರೆಪ್ಪ ಮಹಾರಾಜರು, ಅವರಾದಿಯ ಚನ್ನಗೀರಿ ಮಹಾರಾಜರು, ಸ್ಥಳೀಯ ಶರಣ ಚಂದ್ರಶೇಖರ ಮುಂಡಗನೂರ, ಕುಂದರಗಿಯ ಶರಣೆ ಬಸಮ್ಮ ತಾಯಿಯವರು ದಾಸಭೋಧ ಆಧರಿಸಿ ಪ್ರವಚನ ನೀಡಿದರು. ಹುಬ್ಬಳ್ಳಿ ನೀಲಕಂಠೇಶ್ವರ ಮಠದ ಜಗದ್ಗುರು ಶಿವಶಂಕರ ಶಿವಾಚಾರ್ಯ ಸ್ವಾಮಿಜಿ, ಸಚಿವ ಆರ್.ಬಿ.ತಿಮ್ಮಾಪೂರ ಸೇರಿದಂತೆ ನಾನಾ ಪೂಜ್ಯರನ್ನು, ಗಣ್ಯರನ್ನು ಪುರಸಭೆ ಸದಸ್ಯ ಪ್ರಲ್ಹಾದ ಸಣ್ಣಕ್ಕಿ ಅವರು ಸನ್ಮಾನಿಸಿದರು.

ರಾಮಣ್ಣ ಹಟ್ಟಿ, ನಾಗಪ್ಪ ಸಣ್ಣಕ್ಕಿ, ಬಸವರಾಜ ಚಮಕೇರಿ, ಮನೋಹರ ಶಿರೋಳ, ಶಶಿಧರ ನಕಾತಿ, ಸುರೇಶ ಸಣ್ಣಕ್ಕಿ, ಸತೀಶ ಜುಂಜುರವಾಡ, ಸುನೀಲ ಹೊಸೂರ, ರಾಜು ಬಗನಾಳ, ರವಿ ಜವಳಗಿ, ವಿನೋದ ಸಿಂಪಿ, ಶಿವಾನಂದ ಹುಣಶ್ಯಾಳ, ನಾನಾ ಜೋಷಿ, ಚಂದ್ರಶೇಖರ ಮೋರೆ, ಹಣಮಂತ ಅಳ್ಳಿಮಟ್ಟಿ, ಪ್ರವೀಣ ಸಣ್ಣಕ್ಕಿ, ಯಮನು ಉಪ್ಪಾರ, ಸಿಂಧೂರ ಹಲಸಪ್ಪಗೋಳ, ಮಹಾಲಿಂಗ ಕಂಠಿ, ಬಸವರಾಜ ಅಳ್ಳಿಮಟ್ಟಿ, ಮಹಾಂತೇಶ ಅಳ್ಳಿಮಟ್ಟಿ, ಮಾರುತಿ ಸಣ್ಣಕ್ಕಿ, ಶ್ರೀಧರ ಸಣ್ಣಕ್ಕಿ ಮತ್ತಿತರರು ಇದ್ದರು.

## ವಿಘಟಿತ ತಂತ್ರಗಳಿಗೆ ಹಿಂದುತ್ವ ನಾಶವಾಗದು: ಡಾ. ಕುಲಕರ್ಣಿ

**ರಬಕವಿ-ಬನಹಟ್ಟಿ:** ಶತಮಾನಗಳ ಹಿಂದೆ ಛಿದ್ರವಾಗಿದ್ದ ಹಿಂದೂ ಸಮಾಜವನ್ನು ಏಕತ್ರಗೊಳಿಸಿ ಒಂದೇ ಸೂತ್ರದಡಿ ತರಲು ಸಂಘಟನೆ ಆರಂಭಿಸಲು ಡಾ.ಹೆಡಗೆವಾರ್ ಮುಂದಾದಾಗ ಅಪಹಾಸ್ಯಕ್ಕೀಡಾಗಿದ್ದರು. ಆದರೆ ಇಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘ ಕೋಟ್ಯಂತರ ಸ್ವಯಂ ಸೇವಕರನ್ನು ಹೊಂದಿರುವ ವಿಶ್ವದ ಪ್ರಮುಖ ಸೇವಾ ಸಂಘಟನೆಯಾಗಿದೆ.

ಸ್ವಾತಂತ್ರ್ಯಪೂರ್ವ, ಸ್ವಾತಂತ್ರ್ಯಾನಂತರ ಹಾಗೂ ಇಂದು ಕೂಡ ವಿಘಟಿತ ಮನಸ್ಸುಗಳು ಸಂಘದ ಕ್ರಿಯಾಶೀಲತೆ ಮತ್ತು ಸೇವಾನಿಷ್ಠ ಕಾರ್ಯಕರ್ತರನ್ನು ಕಂಡು ತಲ್ಲಣಗೊಂಡರೂ ಹಿಂದೂ ಸಂಸ್ಕಾರ, ಸಂಸ್ಕೃತಿ ಮತ್ತು ಸಮಾಜದ ರಕ್ಷಣೆಗಾಗಿ ಕಟಿಬದ್ಧರಾದ ಕೋಟ್ಯಂತರ ಕಾರ್ಯಕರ್ತರ ಪಡೆ ತಮ್ಮ ಶಿಸ್ತು, ಸಂಯಮ ಹಾಗೂ ಸಮಯಪಾಲನೆ ಗುಣಗಳಿಂದ ವಿಮುಖರಾಗದೇ ಸಂಘಟನೆ ಬೆಳೆಸುತ್ತ, ಸೇವಾ ಕ್ಷೇತ್ರದಲ್ಲಿ ಮಂಚೂಣಿಯಲ್ಲಿದ್ದಾರೆ. ವಿಘಟಿತ ತಂತ್ರಗಳಿಗೆ ಹಿಂದುತ್ವ ಎಂದಿಗೂ ನಾಶವಾಗದು ಎನ್ನುವುದಕ್ಕೆ ನಮ್ಮ ಒಗ್ಗಟ್ಟು ನಿದರ್ಶನವೆಂದು ಆರ್‌ಎಸ್‌ಎಸ್ ಪ್ರಾಂತ ಪ್ರಮುಖ ಡಾ.ಅಜಯ ಕುಲಕರ್ಣಿ ಹೇಳಿದರು.

ರಬಕವಿ-ರಾಮಪುರ ಮತ್ತು ಬನಹಟ್ಟಿ ಸಹಸ್ರಾರು ಗಣವೇಷಧಾರಿ ಸೇವಕರ, ಅಭಿಮಾನಿಗಳ ಸಮಾವೇಶದಲ್ಲಿ ಮಾತನಾಡಿದ ಅವರು, ದೇಶದ ಮೂಲ ಕುಟುಂಬವಾಗಿದೆ. ಆದರಿಂದು ಧಾರಾವಾಹಿಗಳಲ್ಲಿ ಅತ್ತೆಯನ್ನು ಕೊಲ್ಲಲು, ಸೊಸೆ, ಸೊಸೆಯನ್ನು ಕೊಲ್ಲಲು ಅತ್ತೆ ಮಧ್ಯದಲ್ಲಿ ಅತ್ತಿಗೆಯನ್ನು ಕೊಲ್ಲಲು ಮೈದುನ



ಯತ್ನಿಸುವ ಸೀರಿಯಲ್‌ಗಳು ಜನಪ್ರಿಯವಾಗುತ್ತಿರುವುದು ನಮ್ಮ ಕೌಟುಂಬಿಕ ಜೀವನದಲ್ಲಿನ ಬಿರುಕಿನ ಮತ್ತು ದುರ್ಬಲತೆಯ ಸಂಕೇತವಾಗಿದೆ.

ಸುರಕ್ಷಿತ ಮತ್ತು ಬಲಿಷ್ಠ ದೇಶ ನಿರ್ಮಾಣವಾಗಬೇಕಾದರೆ ಮೊದಲಿಗೆ ಸಮಯೋಚಿತ ಕಾರ್ಯ ದಕ್ಷತೆಯ, ಸಂಯಮಯುತ ಹಾಗೂ ದೇಶಪ್ರೇಮಿ ವ್ಯಕ್ತಿತ್ವದ ನಿರ್ಮಾವಾಗಬೇಕೆಂದರಿತು ಸಂಘ ಸದೃಢ ವ್ಯಕ್ತಿತ್ವ ಬೆಳೆಸುವತ್ತ ಚಿತ್ತ ಹರಿಸಿದೆ.

ದೇಶದ ತುರ್ತು ಪರಿಸ್ಥಿತಿಯ ಕರಾಳ ದಿನಗಳಲ್ಲಿ 80 ಲಕ್ಷ ಸಂಘದ ಕಾರ್ಯಕರ್ತರು ಬಂಧನಕ್ಕೀಡಾದರು. ಯಾವುದೇ ವಿಘಟಿತ ಮನಸ್ಸುಗಳ ಲೋಲುಪತೆಗೆ ಸಂಘದ ಕಾರ್ಯಕರ್ತರು ಬಲಿಯಾಗದೇ ಮತ್ತಷ್ಟು ಹುಮ್ಮಸ್ಸಿನಿಂದ ಕ್ರಿಯಾಶೀಲರಾಗಿ ಸಂಘಟನೆಗೆ ಬಲ ತುಂಬಿದ್ದರಿಂದ ವಿಶ್ವದ ಅಗ್ರ ಸಂಘ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಸ್ವದೇಶಿ ಮಂತ್ರ ಭಾರತೀಯರ ಉಸಿರಾಗಬೇಕು. ಅಮೇರಿಕ, ಚೀನದಂಥ ದೇಶಗಳು ತಮ್ಮ ಸ್ವಾರ್ಥ ಸಾಧನೆಗೆ ಭಾರತ ವಿರೋಧಿ ನೀತಿ ತಾಳಿದ್ದರೂ ನಮ್ಮ ಬೆಳವಣಿಗೆಗೆ ಎಷ್ಟೇ ಅಡೆತಡೆ ಒಡ್ಡಿದರೂ ನಾವು ಸ್ವದೇಶಿ ಉತ್ಪನ್ನಗಳ ಬಳಕೆ ಮತ್ತು ಮೇಕ್ ಇನ್ ಇಂಡಿಯಾ ಸೂತ್ರಕ್ಕೆ ಬದ್ಧರಾದಲ್ಲಿ ವಿಶ್ವದ ಯಾವುದೇ ರಾಷ್ಟ್ರದಿಂದ ನಮ್ಮ ಪ್ರಗತಿ ತಡೆಯಲು ಸಾಧ್ಯವಾಗದು. ಹಿಂದೂ ನಾವೆಲ್ಲರೂ ಒಂದು ಎಂದರಿತು ಸಮಸ್ತರು ಏಕ ಸೂತ್ರದಲ್ಲಿ ಸಂಘಟಿತರಾದಲ್ಲಿ ಮಾತ್ರ ನಾವು ನಮ್ಮತನ ಉಳಿಸಿ, ಬೆಳೆಸಲು ಸಾಧ್ಯವಿದೆ ಎಂದರು.

ವೇದಿಕೆಯಲ್ಲಿ ಪ್ರಭು ಪಾಟೀಲ ಉಪಸ್ಥಿತರಿದ್ದರು. ಧರೇಶ ಕುಂಬಾರ ವಂದಿಸಿದರು.

## ಅ.24 ರಂದು ಪ್ರಗತಿ ಪರಿಶೀಲನಾ ಸಭೆ

**ಕೊಪ್ಪಳ:** ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆಯನ್ನು ಅಕ್ಟೋಬರ್ 24 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜಿ.ಹೆಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಕಡ್ಡಾಯವಾಗಿ ಸಭೆಗೆ ಹಾಜರಾಗಬೇಕು. ಸಮಿತಿಯ ಉಪಾಧ್ಯಕ್ಷರು, ಸದಸ್ಯರು ಸಭೆಯಲ್ಲಿ ಪಾಲ್ಗೊಳ್ಳುವಂತೆ ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಳಿಯಾಳ: ತರಬೇತಿಗೆ ಅರ್ಜಿ ಆಹ್ವಾನ

**ಕೊಪ್ಪಳ:** ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಸಂಸ್ಥೆಯಿಂದ ಉಚಿತವಾಗಿ ಸಿಸಿ ಟಿವಿ ಕ್ಯಾಮೆರಾ ಅಳವಡಿಕೆ, ದುರಸ್ತಿ ಹಾಗೂ ಫಾಸ್ಟ್ ಫುಡ್ ಸ್ಟಾಲ್ ಉದ್ಯಮಿ ತರಬೇತಿಯನ್ನು ನೀಡಲಾಗುತ್ತಿದ್ದು, ಆಸಕ್ತ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಾನದ ನಿರುದ್ಯೋಗಿ ಯುವಕ ಯುವತಿರಿಯರಿಗೆ ನವೆಂಬರ್ ತಿಂಗಳಲ್ಲಿ ತರಬೇತಿಯನ್ನು ಆರಂಭಿಸಲಾಗುತ್ತದೆ. ಈ ತರಬೇತಿಯು ಊಟ ಮತ್ತು ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದ್ದು, ಸ್ವ-ಉದ್ಯೋಗ ಪ್ರಾರಂಭಿಸಿ, ಸ್ವಾವಲಂಬಿ ಜೀವನ ನಡೆಸಲು ಅನುಕೂಲವಾಗಲಿದೆ. ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಆದ್ಯತೆ ನೀಡಲಾಗುತ್ತದೆ. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳ ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಗಳನ್ನು ನೀಡಲಾಗುತ್ತದೆ. ಆಸಕ್ತರು ವೆಬ್‌ಸೈಟ್ www.rsetihaliyal.org ಮೂಲಕ ಆನ್‌ಲೈನ್ ನಲ್ಲಿ ಅರ್ಜಿಯನ್ನು ನವೆಂಬರ್ 5 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ವಿಳಾಸಕ್ಕೆ ಅಥವಾ ಮೊ.ಸಂ: 8217236973, 9483485489, 9482188780 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## 61 ಅಂಗನವಾಡಿ ಕಾರ್ಯಕರ್ತೆ, 177 ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

**ಹಾವೇರಿ:** ಹಾವೇರಿ ಜಿಲ್ಲೆಯಲ್ಲಿ ಖಾಲಿ ಇರುವ 61 ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳಿಗೆ ಹಾಗೂ 177 ಸಹಾಯಕಿಯರ ಹುದ್ದೆಗಳ ಭರ್ತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅಂಗನವಾಡಿ ಕಾರ್ಯಕರ್ತೆ ಬ್ಯಾಡಗಿ-03, ಹಾನಗಲ್-13, ಹಾವೇರಿ-05, ಹಿರೇಕೆರೂರು-12, ರಾಣೇಬೆನ್ನೂರು-20, ಸವಣೂರು-04, ಶಿಗ್ಗಾಂವ್-04 ಸೇರಿ 61 ಹುದ್ದೆಗಳಿಗೆ ಹಾಗೂ ಸಹಾಯಕಿಯರ ಬ್ಯಾಡಗಿ-17, ಹಾನಗಲ್-21, ಹಾವೇರಿ-29, ಹಿರೇಕೆರೂರು-27, ರಾಣೇಬೆನ್ನೂರು-34, ಸವಣೂರು-23, ಶಿಗ್ಗಾಂವ್-26 ಸೇರಿ 177 ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿದೆ. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ದ್ವಿತೀಯ ಪಿ.ಯು.ಸಿ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಗೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಕನಿಷ್ಠ 19 ವರ್ಷ ಗರಿಷ್ಠ 35 ವರ್ಷ ವಯೋಮಿತಿಯೊಳಗಿನ ಹೆಣ್ಣು ಮಕ್ಕಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರು ದಿನಾಂಕ 17-11-2025 ರೊಳಗಾಗಿ ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸಂಪರ್ಡಿಸಬಹ್ಮದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರಳ ವಿವಾಹ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

**ಹಾವೇರಿ:** ಪ್ರಸಕ್ತ 2025-26ನೇ ಸಾಲಿನಲ್ಲಿ ಹಾವೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತರ ಸಮುದಾಯದವರಿಂದ ಸರಳ ವಿವಾಹಕ್ಕೆ ಪ್ರೋತ್ಸಾಹ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುವ ಸಮೂಹ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ ರೂ.50 ಸಾವಿರ ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹೊಸ ಅರ್ಜಿಯನ್ನು ದಿನಾಂಕ 30-10-2025ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹಾವೇರಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿ (ದೂರವಾಣಿ ಸಂಖ್ಯೆ 08375-234505) ಸಂಪರ್ಕಿಸಲು ಕೋರಲಾಗಿದೆ.

# ಕರ್ನಾಟಕ ರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ



**ಕೊಪ್ಪಳ:** ನವೆಂಬರ್ 1 ರಂದು ಕೊಪ್ಪಳ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯೋತ್ಸವವನ್ನು ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ಆಚರಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶನಿವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಿಸುವ ಕುರಿತು ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಾಜ್ಯೋತ್ಸವದಿನದಂದು ಬೆಳಿಗ್ಗೆ 7 ಗಂಟೆಗೆ ಕೊಪ್ಪಳ ನಗರದ ತಹಶೀಲ್ದಾರರ ಕಚೇರಿ ಆವರಣದಲ್ಲಿ ನಾಡ ದೇವತೆ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದೇವಿಯ ಭಾವಚಿತ್ರದ ಮೆರವಣಿಗೆ ಅಶೋಕ ವೃತ್ತ, ಕೇಂದ್ರೀಯ ಬಸ್ ನಿಲ್ದಾಣದ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣದವರೆಗೆ ನಡೆಯಲಿದ್ದು, ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗವಹಿಸುವಂತೆ ಹಾಗೂ ಮೆರವಣಿಗೆ ಮತ್ತು ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿರುವ ವೇದಿಕೆ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳು, ತಮ್ಮ ಸಿಬ್ಬಂದಿಗಳೊಂದಿಗೆ ಭಾಗವಹಿಸಬೇಕು. ಕಾರ್ಯಕ್ರಮ ದಿನದಂದು ಭುವನೇಶ್ವರಿ ದೇವಿಯ ಭಾವಚಿತ್ರದ ಮೆರವಣಿಗೆ, ವೇದಿಕೆ ಅಲಂಕಾರ, ಪಥಸಂಚಲನ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸೂಕ್ತ ಪೂರ್ವ ತರಬೇತಿ ನೀಡಿ, ಶಿಸ್ತುಬದ್ಧ ಪಥಸಂಚಲನ ಮತ್ತು ಅರ್ಥಪೂರ್ಣವಾದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಬೇಕು. ಕನ್ನಡ ನಾಡು, ನುಡಿ, ದೇಶಭಕ್ತಿ ಗೀತೆಗಳಿಗೆ ಮಾತ್ರ ಅವಕಾಶ ನೀಡಬೇಕು. ಈ ನಿಟ್ಟಿನಲ್ಲಿ ರಚಿಸಲ್ಪಟ್ಟ ಸಮಿತಿಗಳು ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಕೇಂದ್ರದ ಪ್ರಮುಖ ರಸ್ತೆಗಳು, ವೃತ್ತಗಳ ಸ್ವಚ್ಛತೆ ಮತ್ತು ಅಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು. ಕ್ರೀಡಾಂಗಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆಗೆ ನಗರಸಭೆಯಿಂದ ಅಗತ್ಯ ಕ್ರಮ ವಹಿಸಬೇಕು. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮಕ್ಕಳಿಗೆ ಕೆ.ಕೆ.ಎಸ್.ಆರ್.ಟಿ.ಸಿ ಅವರಿಂದ ಸೂಕ್ತ ಬಸ್ ಸೌಕರ್ಯ ಒದಗಿಸಬೇಕು. ಪಥಸಂಚಲನ ಮತ್ತು ಅದರ ಪೂರ್ವ ತರಬೇತಿಗೆ ಪಾಲ್ಗೊಳ್ಳುವ ಮಕ್ಕಳಿಗೆ ಹಾಲು ಅಥವಾ ಲಘು ಉಪಹಾರ ವಿತರಣೆಗೆ ಅಕ್ಷರ ದಾಸೋಹ ಮತ್ತು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಕ್ರೀಡಾಂಗಣದಲ್ಲಿ ಆರೋಗ್ಯ ಇಲಾಖೆಯಿಂದ ತುರ್ತು ಪರಿಸ್ಥಿತಿ ನಿರ್ವಹಣೆಗಾಗಿ ಅಗತ್ಯ ಸಿಬ್ಬಂದಿಯೊಂದಿಗೆ ಅಂಬ್ಯುಲೆನ್ಸ್, ಅಗ್ನಿಶಾಮಕ ಇಲಾಖೆಯಿಂದ ಅಗ್ನಿಶಾಮಕ ವಾಹನ ಒದಗಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಿ.ಮಂಜುನಾಥ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು, ಕನ್ನಡ ಮತ್ತು ಸಂಸಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಸೇರಿದಂತೆ ಜಿಲ್ಲಾಮಟ್ಟದ ಇತರೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳು ಸಕಾರಾತ್ಮಕ ಭಾವನೆಗಳನ್ನು ಬೆಳೆಸಿಕೊಳ್ಳಿ




**ಬಸವನಬಾಗೇವಾಡಿ:** ವಿದ್ಯಾರ್ಥಿಗಳ ಸಾಧನೆಗೆ ಅಡ್ಡಿಯಾಗುವ ಮೊಬೈಲ್ ದುರ್ಬಳಕೆಯಿಂದ ದೂರವಿದ್ದುಕೊಂಡು ಆಧುನಿಕ ಜಗತ್ತಿನಲ್ಲಿ ಸವಾಲುಗಳನ್ನು ಮೆಟ್ಟಿನಿಲ್ಲಲು ಸಕಾರಾತ್ಮಕ ಭಾವನೆಗಳನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳುವಂತಾಗಬೇಕೆಂದು ಕಂದಾಯ ವಿಭಾಗಾಧಿಕಾರಿ ಗುರುನಾಥ ದಡ್ಡೆ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ 2025-26 ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್. ಎಸ್. ಎಸ್,ಐ ಕ್ಯೂ ಎ ಸಿ ಹಾಗೂ ವಿವಿಧ ಘಟಕಗಳ ಉದ್ಘಾಟನೆ ಸಮಾರಂಭ ಮತ್ತು ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಿಕ್ಷಣದಿಂದ ವೈಯಕ್ತಿಕ ಹಾಗೂ ಸಾಮಾಜಿಕ ಬದಲಾವಣೆ ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಚ ಪಟ್ಟಣಶೆಟ್ಟಿ ಮಾತನಾಡಿ,ಈ ಕಾಲೇಜಿನಲ್ಲಿ ಉತ್ತಮ ಶಿಕ್ಷಣ ದೊರಕುತ್ತಿದೆ. ಬಡ ವಿದ್ಯಾರ್ಥಿಗಳಿಗೆ ಅನುಕೂಲಕರವಾಗಿದೆ. ಈ ಕಾಲೇಜಿಗೆ, ನಿಮ್ಮ ತಂದೆ ತಾಯಂದಿರಿಗೆ ಕೀರ್ತಿ ತರುವ ಕಾರ್ಯ ವಿದ್ಯಾರ್ಥಿಗಳು ಮಾಡುವಂತಾಗಬೇಕು. ಕಾಲೇಜಿನ ಅಭಿವೃದ್ಧಿಗೆ ನಾನು ಸದಾ ಸಿದ್ಧನಾಗಿದ್ದೇನೆ. ಎಲ್ಲರೂ ಕಾಲೇಜಿನ ಪ್ರಗತಿಗೆ ಶ್ರಮಿಸಬೇಕು ಎಂದು ಹೇಳಿದರು.

ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಮಾತನಾಡಿ, ವಿದ್ಯಾರ್ಥಿಗಳು ಗುರು ಹಿರಿಯರಿಗೆ ಗೌರವ ನೀಡುವ ಗುಣ ಬೆಳೆಸಿಕೊಳ್ಳಬೇಕು. ಮುಂದೆ ಗುರಿ ಹಿಂದೆ ಗುರು ಇಟ್ಟುಕೊಂಡು ಅಧ್ಯಯನಶೀಲರಾಗಬೇಕು. ಸಾಧನೆಗೆ ಆತ್ಮವಿಶ್ವಾಸ ಬೇಕು. ಗ್ರಾಮೀಣ ಭಾಗದಲ್ಲಿದ್ದರೂ ಕನ್ನಡ ಮಾಧ್ಯಮದಲ್ಲೇ ಓದಿದರೂ ಉನ್ನತ ಹುದ್ದೆ ಪಡೆಯಬಹುದು. ಒಳ್ಳೆಯವರ ಸಂಗಮಾಡಿ, ಮಾನವೀಯತೆ ಗುಣ ಇರಲಿ ಎಂದು ಹೇಳಿದರು.

ಅಧ್ಯಕ್ಷತೆಯ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಎನ್. ಬಿ. ಹೊಸಮನಿ ಮಾತನಾಡಿದರು.

ವೇದಿಕೆಯಲ್ಲಿ ದೈಹಿಕ ಶಿಕ್ಷಣ ನಿರ್ದೇಶಕ ರೇಣುಕಾ ಅಂಬಲಿ,ರಾಜ್ಯಶಾಸ್ತ್ರ ವಿಭಾಗದ ಡಾ. ಹೆಚ್. ಎಂ. ನಾಟಿಕಾರ ಇದ್ದರು. ಕನ್ನಡ ಸಹಾಯಕ ಪ್ರಾಧ್ಯಾಪಕ ಶ್ರೀಶೈಲ ಬಳವಾಟ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿಕಾಂ ವಿದ್ಯಾರ್ಥಿನಿಯರು ಪ್ರಾರ್ಥನೆ ಗೀತೆ ಹಾಡಿದರು. ಕನ್ನಡ ವಿಭಾಗದ ಬಸವರಾಜ ಮಾರೆಮ್ಮಗೋಳ ಅತಿಥಿಗಳನ್ನು ಪರಿಚಯಿಸಿ, ಸ್ವಾಗತಿಸಿದರು. ಇಸ್ಮಾಯಿಲ್ ಶಫಿಯುಲ್ಲ ಕಾರ್ಯಕ್ರಮ ನಿರೂಪಿಸಿದರು.ಡಾ. ಭೀಮಶಿ ಹಡಪದ ವಂದಿಸಿದರು.

## ಪದವೀಧರ ಮತದಾರರ ನೋಂದಣಿ

### ತಾಲೂಕುವಾರು ಕಾರ್ಯಕ್ರಮಗಳನ್ನು ಆಯೋಜಿಸಲು ಸೂಚನೆ



**ಧಾರವಾಡ:** ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಧಾರವಾಡ ಜಿಲ್ಲೆಯಲ್ಲಿ 1 ನೇ ನವೆಂಬರ 2025 ಕ್ಕೆ ಮುಂಚೆ ಕನಿಷ್ಠ 3 ವರ್ಷಗಳಷ್ಟು ಮೊದಲು ಭಾರತದಲ್ಲಿರುವ ಯಾವುದಾದರೊಂದು ವಿಶ್ವವಿದ್ಯಾಲಯದ ಪದವೀಧರನಾಗಿರುವ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರುವ ಪ್ರತಿಯೊಬ್ಬ ವ್ಯಕ್ತಿಯು ನವೆಂಬರ್ 06, 2025 ರೊಳಗಾಗಿ ತಮ್ಮ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಕೊಳ್ಳಲು ಮತದಾರರ ಜಾಗೃತಿಗಾಗಿ ಅಗತ್ಯ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಅವರು ಹೇಳಿದರು.

ಅವರು ಶನಿವಾರ ಸಂಜೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ಕಚೇರಿ ಸಭಾಂಗಣಲದಲ್ಲಿ ಪದವೀಧರ ಮತಕ್ಷೇತ್ರದ ಮತದಾರರ ಪಟ್ಟಿ ಸಿದ್ಧತೆ ಕುರಿತು ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಹಾಗೂ ಮತದಾರರ ನೋಂದಣಿ ಕುರಿತು ಅಧಿಕಾರಿಗಳ ಸಭೆ ಜರುಗಿಸಿ, ಮಾತನಾಡಿದರು.

ಸಹಾಯಕ ಮತದಾರರ ನೋಂದಣಾಧಿಕಾರಿಗಳು ಮತ್ತು ನಿಯೋಜಿತ ಅಧಿಕಾರಿಗಳು ಮತದಾರರ ಪಟ್ಟಿಗೆ ಸೇರಲು ಅರ್ಹ ಮತದಾರರನ್ನು ಗುರುತಿಸಿ, ಮತದಾರರ ಪಟ್ಟಿಗೆ ಸೇರ್ಪಡೆಯಾಗುವಂತೆ ಮಾಹಿತಿ ನೀಡಬೇಕು. ಅರ್ಹ ಮತದಾರರು ತಮ್ಮ ಅರ್ಜಿಗಳನ್ನು ನಿರ್ದಿಷ್ಠಪಡಿಸಿರುವ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಮತ್ತು ನಿಯೋಜಿತ ಅಧಿಕಾರಿಗಳ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬಹುದು. ಈ ಕುರಿತು ಎಲ್ಲ ಸರ್ಕಾರಿ ಕಚೇರಿಗಳಲ್ಲಿ, ಶಾಲಾ ಕಾಲೇಜುಗಳಲ್ಲಿ ಐಇಸಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಅರ್ಹ ಎಲ್ಲ ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ನೋಂದಾಯಿಸಲು ಮಾರ್ಗದರ್ಶನ ನೀಡಬೇಕೆಂದು ಅವರು ಸೂಚಿಸಿದರು.

ಮತದಾರರು ವಿಳಾಸದ ದಾಖಲೆಗಾಗಿ ಮತದಾರರ ಗುರುತಿನ ಚೀಟಿ ಅಥವಾ ಆಧಾರ ಕಾರ್ಡ ಅಥವಾ ರೇಷನ್ ಕಾರ್ಡ ಅಥವಾ ಇಂಡಿಯನ್ ಪಾರ್ಸ್‌ಪೋರ್ಟ ಅಥವಾ ಡ್ರೈವಿಂಗ್ ಲೈಸನ್ಸ್ ಇವುಗಳಲ್ಲಿ ಯಾವುದಾದರೂ ಒಂದು ದಾಖಲೆ ಅಥವಾ ಭಾರತ ಚುನಾವಣಾ ಆಯೋಗವು ನಿರ್ದಿಷ್ಟಪಡಿಸಿರುವ ದಾಖಲೆಗಳೊಂದಿಗೆ ಅರ್ಜಿಯನ್ನು ಸಂಬಂಧಿಸಿದ ಸಹಾಯಕ ಮತದಾರರ ನೋಂದಣಾಧಿಕಾರಿಗಳಲ್ಲಿ ಅಥವಾ ಗೊತ್ತುಪಡಿಸಿದ ನಿಯೋಜಿತ ಅಧಿಕಾರಿಗಳಿಗೆ ಸಲ್ಲಿಸಬೇಕು ಎಂದು ಅವರು ಹೇಳಿದರು.

ಜಿಲ್ಲೆಯ ಎಲ್ಲ ನಗರಗಳಲ್ಲಿ ಮತ್ತು ಗ್ರಾಮಗಳಲ್ಲಿ ಮತದಾರರ ಜಾಗೃತಿ ಸಂದೇಶವನ್ನು ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ಘನತ್ಯಾಜ್ಯ ಸಂಗ್ರಹ ವಾಹನಗಳಲ್ಲಿ ಜಿಂಗಲ್ಸ್ ಬಳಸುವ ಮೂಲಕ ಮತದಾರರಿಗೆ ಮಾಹಿತಿ ತಲುಪಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ತೇಜಸ್ವಿನಿ ನಾರಾಯಣಕರ್, ಎಲ್ಲ ತಾಲೂಕುಗಳ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಸೇರಿದಂತೆ ಇತರರು ಇದ್ದರು.

## ಕಾರದ ಪುಡಿ ಎರಚಿ 15ಲಕ್ಷ ಎಗರಿಸಿದ ಖದೀಮರು

**ತಾಳಿಕೋಟೆ:** ಹತ್ತಿ ಖರೀದಿಗೆ ಆಗಮಿಸುತ್ತಿದ್ದ ವ್ಯಕ್ತಿಯೋರ್ವನ ಕಾರಿಗೆ ಎದುರಿನಿಂದ ಕಲ್ಲು ಹೊಡೆದಿದ್ದಲ್ಲದೇ ಕಾರಿನ ಚಾಲಕನ ಕಣ್ಣಿಗೆ ಕಾರದ ಪುಡಿ ಎರಚಿ ಆತನ ಬಳಿ ಇದ್ದ 15 ಲಕ್ಷ 50 ಸಾವಿರ ರೂ. ಎಗರಿಸಿಕೊಂಡು ಪರಾರಿಯಾದ ಘಟನೆ ಶುಕ್ರವಾರರಂದು ತಾಲೂಕಿನ ಲಕ್ಕುಂಡಿ ಗ್ರಾಮದ ಕ್ರಾಸ್ ಹತ್ತಿರ ನಡೆದಿದೆ.

ಶಹಾಪೂರ ತಾಲೂಕಿನ ಹರಿಶ ಬಸನಗೌಡ ಪಾಟೀಲ(32) ಎಂಬವರು ಹತ್ತಿ ಖರೀದಿಸಿ ಮತ್ತೊಂದು ಕಡೆ ಮಾರಾಟ ಮಾಡುವ ಕಮಿಷನ್ ಏಜಂಟಾಗಿದ್ದು ಇತನು ದಿ.17 ಶುಕ್ರವಾರರಂದು ಬೆಳಿಗ್ಗೆ 11-30 ಗಂಟೆಯ ಸಮಯದಲ್ಲಿ ಶಹಾಪೂರದಿಂದ ಫೀರಾಪೂರ ಗ್ರಾಮದ ಮಾರ್ಗವಾಗಿ ತಾಳಿಕೋಟೆ ಪಟ್ಟಣದ ಅಡತ್ ಮರ್ಚಂಟಿಗೆ ಹತ್ತಿ ಖರೀದಿಗೆ ಆಗಮಿಸುತ್ತಿದ್ದ ಸಮಯದಲ್ಲಿ ಲಕ್ಕುಂಡಿ ಗ್ರಾಮದ ಕ್ರಾಸ್ ಹತ್ತಿರ ಬೈಕ್‌ನಲ್ಲಿ ಎದುರಿನಿಂದ ಬಂದ ಇಬ್ಬರ ಖದೀಮರು ಕಲ್ಲಿನಿಂದ ಕಾರಿನ ಎದುರಿನ ಗಾಜಿಗೆ ಹೊಡೆದಿದ್ದರಿಂದ ಹರೀಶ ಪಾಟೀಲ ಅವರು ಕಾರನ್ನು ಸ್ಥಳದಲ್ಲಿಯೇ ನಿಲ್ಲಿಸಿದ್ದರಿಂದ ಕಾರಿನ ಬಳಿ ಬಂದ ಇಬ್ಬರು ಖದೀಮರು ಕಣ್ಣಿಗೆ ಕಾರದ ಪುಡಿ ಎರಚಿದ್ದಲ್ಲದೇ ಹತ್ತಿ ಖರೀದಿಗೆ ತಂದಿದ್ದ 15 ಲಕ್ಷ 50 ಸಾವಿರ ರೂ. ಬ್ಯಾಗನ್ನು ಕಾರಿನಿಂದ ಕಿತ್ತುಕೊಂಡು ಪರಾರಿಯಾಗಿದ್ದಾರೆಂದು ಹರಿಶ ಪಾಟೀಲ ಅವರು ತಾಳಿಕೋಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

## ಬೂದಿಹಾಳದಲ್ಲಿ ನೂತನ ಅಂಗನವಾಡಿ ಕೇಂದ್ರ ಉದ್ಘಾಟನೆ



ತಾಲೂಕಿನ ಬೂದಿಹಾಳ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಅಂಗನವಾಡಿ ಕೇಂದ್ರವನ್ನು ಶಾಸಕ ಡಿ.ಎಮ್.ಐಹೊಳೆ ಉದ್ಘಾಟಿಸಿದರು.

**ರಾಯಬಾಗ:** ಮತಕ್ಷೇತ್ರದಲ್ಲಿ ಅವಶ್ಯಕತೆ ಇರುವ ಎಲ್ಲ ಕಡೆಗಳಲ್ಲಿ ಅಂಗನವಾಡಿ ಕೇಂದ್ರಗಳನ್ನು ನಿರ್ಮಿಸಿ ಕೊಡಲಾಗುತ್ತಿದೆ ಎಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು.

ಶನಿವಾರ ತಾಲೂಕಿನ ಬೂದಿಹಾಳ ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮತ್ತು ನರೇಗಾ ಹೊಂದಾಣಿಕೆ ಯೋಜನೆಯಡಿ16 ಲಕ್ಷ ರೂ. ಅನುದಾನದಲ್ಲಿ ನೂತನವಾಗಿ ನಿರ್ಮಿಸಿದ ಅಂಗನವಾಡಿ ಕೇಂದ್ರ-1 ಹಾಗೂ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 5 ಲಕ್ಷ ರೂ. ಅನುದಾನದಲ್ಲಿ ದುರ್ಗಾದೇವಿ ಗುಡಿ ಹತ್ತಿರ ನೂತನವಾಗಿ ನಿರ್ಮಿಸಿರುವ ಸಮುದಾಯ ಭವನ ಉದ್ಘಾಟಿಸಿ ಮಾತನಾಡಿದ ಅವರು, ಕ್ಷೇತ್ರದ ಪ್ರತಿ ಗ್ರಾಮಗಳಿಗೆ ಎಲ್ಲ ಮೂಲಭೂತ ಸೌಕರ್ಯ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವುದಾಗಿ ತಿಳಿಸಿದರು.

ಸಿಡಿಪಿಒ ಭಾರತಿ ಕಾಂಬಳೆ, ಸದಾಶಿವ ಘೋರ್ಪಡೆ, ಅಣ್ಣಾಸಾಹೇಬ ಖೇಮಲಾಪೂರೆ, ಭಾರತಿ ಲೋಹಾರ, ಅಜೀತ ಮಾಂಗ, ರಾಮಾ ನೂಲಿ, ಶಿವಗೌಡ ಪಾಟೀಲ, ಅಶೋಕ ಮಾಂಗ, ಸಿದ್ದಪ್ಪ ಮಾಂಗ, ಅಡಿವೆಪ್ಪ ಮಾಂಗ ಸೇರು ಅನೇಕರು ಇದ್ದರು.

## ಅ.23 ರಂದು ರಾಷ್ಟ್ರಮಟ್ಟದ ಜಂಗಿನಿಕಾಲಿ ಕುಸ್ತಿ



**ರಬಕವಿ-ಬನಹಟ್ಟಿ,:** ಬನಹಟ್ಟಿ ನಗರದ ಆರಾಧ್ಯದೈವ ಶ್ರೀ ಮಲ್ಲಿಕಾರ್ಜುನ ಜಾತ್ರೆ ನಿಮಿತ್ಯ ಅ. 23 ರಂದು ಬನಹಟ್ಟಿಯ ಅಶೋಕ ಕಾಲನಿಯಲ್ಲಿರುವ ಶ್ರೀ ಸೋಮವಾರ ಪೇಠೆಯ ಕುಸ್ತಿ ಮೈದಾನದಲ್ಲಿ ನಡೆಯಲಿದೆ ಎಂದು ಕುಸ್ತಿ ಕಮೀಟಿಯ ಹಿರಿಯರಾದ ಬ್ರೀಜ್‌ಮೋಹನ ಡಾಗಾ ತಿಳಿಸಿದ್ದಾರೆ.

ಅವರು ಶನಿವಾರ ಬನಹಟ್ಟಿಯಲ್ಲಿ ಕುಸ್ತಿಯ ಪರಿಕರಗಳನ್ನು ಬೀಡುಗಡೆ ಮಾಡಿ ಮಾತನಾಡಿದರು. ಈ ಸಂದರ್ಭದಲ್ಲಿ ಸೋಮವಾರ ಪೇಟೆ ಸಮಸ್ತ ದೈವ ಮಂಡಳದ ಚೇರಮನ್ನರಾದ ಮಲ್ಲಿಕಾರ್ಜುನ ತುಂಗಳ ಮಾತನಾಡಿ, ನೆರೆಯ ದಕ್ಷಿಣ ಮಹಾರಾಷ್ಟ್ರ ಹಾಗು ಕರ್ನಾಟಕದ ಬಹುತೇಕ ನಗರಗಳಿಂದ ಇಲ್ಲಿನ ಕುಸ್ತಿಗಳನ್ನು ನೋಡಲು ವೀಕ್ಷಕರ ದಂಡೇ ಆಗಮಿಸುತ್ತದೆ. ಹೆಚ್ಚಿನ ಪ್ರಮಾಣದಲ್ಲಿ ಕುಸ್ತಿ ಪಟುಗಳು ದಸರಾ ಮಹೋತ್ಸವದ ಅಂಗವಾಗಿ ಮೈಸೂರಿನಲ್ಲಿ ಪಾಲ್ಗೊಳ್ಳುವ ಕುಸ್ತಿ ಪಟುಗಳು ಇಲ್ಲಿ ಪಾಲ್ಗೊಳ್ಳುವದು ವಿಶೇಷವಾಗಿದೆ. ಪ್ರಮುಖವಾಗಿ ಮೈಸೂರು ದಸರಾ ಕಂಠೀರವ ಕಾರ್ತಿಕ ಪೈ. ಕಾಟೆ ಜೊತೆ ಸೊಲ್ಲಾಪೂರದ ವಿಕಾಸ ಪೈ. ದೋತ್ರೆ ಹಾಗೂ ದಸರಾ ಕಂಠೀರವ ಕಾಮೇಶ ಪೈ. ಪಾಟೀಲ ಜೊತೆ ಇಂಚಲಕರಂಜಿಯ ಮಹಾರಾಷ್ಟ್ರ ಛಾಂಪಿಯನ ಪ್ರಶಾಂತ ಪೈ. ಜಗತಾಪ ನಡುವೆ ಮೊದಲ ನಂಬರಿನ ಕುಸ್ತಿಗಳು ನಡೆಯಲಿವೆ. ಒಟ್ಟು 60ಕ್ಕೂ ಹೆಚ್ಚು ಪ್ರಮುಖ ಕುಸ್ತಿಗಳು ನಡೆಯಲಿವೆ. ಅದರಂತೆ ಕುಸ್ತಿ ವಿಕ್ಷಿಸಲು ಈ ಭಾಗದಿಂದ ಸಾವಿರಾರು ಜನರು ಆಗಮಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕಿರಣ ಭದ್ರನ್ನವರ, ಶ್ರೀನಿವಾಸ ಹಳ್ಳಾಳ, ಈರಪ್ಪ ಹಿಪ್ಪರಗಿ, ಶೇಖರ ಸಂಪಗಾವಿ, ಮಲ್ಲಪ್ಪ ಜನವಾಡ, ಈರಪ್ಪ ಬರಗಲ್ಲ, ಮಲ್ಲಿಕಾರ್ಜುನ ಬಾವಲತ್ತಿ, ಚನ್ನಪ್ಪ ಗುಣಕಿ, ಶಿವು ಬಾಗೇವಾಡಿ, ಶಿವು ಗುಂಡಿ, ಮಲ್ಲಪ್ಪ ಜನವಾಡ, ಮಲ್ಲಿನಾಥ ಕಕಮರಿ, ರಮೇಶ ಮಹಿಷವಾಡಗಿ, ಕಾಡಪ್ಪ ಜಿಡ್ಡಿಮನಿ, ಕಲ್ಲಪ್ಪ ಹೊರಟ್ಟಿ, ಶ್ರೀಶೈಲ ಟಿರಕಿ, ಸುರೇಶ ಭದ್ರನ್ನವರ, ದುಂಡಪ್ಪ ಸೋಲ್ಲಾಪೂರ, ಈರಪ್ಪ ಮಟ್ಟಿಕಲ್ಲಿ, ರಾಜು ಲುಕ್ಕ ಸೇರಿದಂತೆ ಅನೇಕರಿದ್ದರು.



**ಗೋಕಾಕಕ್ಕೆ ಆಗಮಿಸಿದ ಕಿತ್ತೂರು ಜ್ಯೋತಿ ಕಿತ್ತೂರು ರಾಣಿ ಚೆನ್ನಮ್ಮನ ರಥವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಂಗನವಾಡಿ ಕಾರ್ಯಕರ್ತೆಯರು ಕುಂಭಮೇಳದಿಂದ ಸ್ವಾಗತಿಸಲಾಯಿತು. ಈ ಸಂದರ್ಭದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.**

## ಕೊಳಗೇರಿ ನಿವಾಸಿಗಳಿಗೆ ಆಹಾರ ಕಿಟ್ ವಿತರಣೆ

**ವಿಜಯಪುರ:** ದೀಪದ ಹಬ್ಬ ದೀಪಾವಳಿಯ ನಿಮಿತ್ಯವಾಗಿ ಕೇರಿಂಗ್ ಸೋಲ್ಸ್ ಚಾರಿಟೇಬಲ್ ಟ್ರಸ್ಟ್ ಬಾಗಲಕೋಟ ಕ್ರಾಸ್ ಹಿಂಭಾಗದ ಕೊಳಗೇರಿ ಪ್ರದೇಶದಲ್ಲಿ ಸುಮಾರು 100 ಮನೆಗಳಿಗೆ ಆಹಾರ ಕಿಟ್ ಗಳನ್ನು ವಿತರಿಸಿ ಮಾನವೀಯತೆಯನ್ನು ಮೆರೆದಿದ್ದಾರೆ.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಿಲ್ಲಾ ಯೂಥ್ ಕಾಂಗ್ರೆಸ್ ಅಧ್ಯಕ್ಷ ಶಕೀಲ ಬಾಗಮಾರೆ ಮಾತನಾಡಿ, ಈ ದಿನಗಳಲ್ಲಿ ಜನರು ಜಾತಿ ಮತಿ ಎಂದು ಬಡಿದಾಡುತ್ತಿರುವಾಗ ಇಂತಹ ಕಾರ್ಯಗಳು ಎರಡೂ ಸಮೂಹ ನಡುವೆಗಳ ಮಧ್ಯೆ ಕೊಂಡಿಯಾಗಿ ಪ್ರೀತಿಭಾಂದವ್ಯವನ್ನು ಬೆಳೆಸುತ್ತದೆ. ಹಾಗೂ ಸಮಾಜದಲ್ಲಿ ಎಲ್ಲರೂ ಪ್ರೀತಿ ಬಾಂಧವ್ಯದಿಂದ ಮುನ್ನಡೆಯಬೇಕು ಎಂದು ಕರೆ ನೀಡಿದರು.

ಇನ್ನೋರ್ವ ಅತಿಥಿಯಾದ ರಾಷ್ಟ್ರ ಪ್ರಶಸ್ತಿ ವಿಜೇತ ಜಾವೀದ ಜಮಾದಾರ ಮಾತನಾಡಿ, ಇಂತಹ ಕಾರ್ಯಕ್ರಮಗಳು ಇಡೀ ಭಾರತ ದೇಶದಲ್ಲಿ ಶಾಂತತೆಯನ್ನು ಕಾಯ್ದುಕೊಳ್ಳಲು ಸಹಕಾರಿಯಾಗಿದೆ. ಅದರಂತೆ ಜನರಲ್ಲಿ ಪರಸ್ಪರ ಪ್ರೀತಿ ಬೆಳೆಸಲು ಹಬ್ಬಗಳು ಸಹಕಾರಿಯಾಗಿವೆ ಎಂದರು. ಇದೇ ಸಂದರ್ಭದಲ್ಲಿ ಸ್ವಯಂ ಸೇವಾ ಸಂಸ್ಥೆವತಿಯಿಂದ ಅನೆಮಿಯಾಯಿಂದ ಬಳಲುತ್ತಿರುವವರನ್ನು ತಪಾಸಣೆ ಮಾಡಿ ಉಚಿತವಾಗಿ ಮಾತ್ರೆಗಳನ್ನು ನೀಡಲಾಯಿತು. ಈ ಸಾಮಾಜಿಕ ಕಳಕಳಿಯ ಕಾರ್ಯ ಮಾಡುತ್ತಿರುವ ಸಂಸ್ಥೆಯ ಅಧ್ಯಕ್ಷ ಪ್ರೊ. ಆಸೀಫ ಇಕ್ಬಾಲ್ ದೊಡಮನಿ ಇಲ್ಲಿಯ ಪ್ರತಿಷ್ಠಿತ ಸಿಕ್ಯಾಬ್ ಸಂಸ್ಥೆಯ ಮೆಕ್ಯಾನಿಕಲ್ ವಿಭಾಗದಲ್ಲಿ ಸಹಾಯಕ ಅಧ್ಯಾಪಕರಾಗಿ ಕಾರ್ಯ ನಿರ್ವಹಿಸುತ್ತಿರುವುದು ಅಷ್ಟೇ ಅಭಿನಂದನೀಯವಾಗಿದೆ.

ಈ ಸಂದರ್ಭದಲ್ಲಿ ಸ್ಪಂದನಾ ಸ್ವಯಂ ಸೇವಾ ಸಂಸ್ಥೆಯ ಕಾರ್ಯದರ್ಶಿಗಳಾದ ಪ್ರಶಾಂತ ದೇಶಪಾಂಡೆ, ಕೇರಿಂಗ್ ಸೋಲ್ಸ್ ಸಂಸ್ಥೆಯ ಉಪಾಧ್ಯಕ್ಷರಾದ ಎಂ.ಎಲ್.ದೊಡಮನಿ, ಟ್ರಸ್ಟಿಗಳಾದ ಶ್ರೀನಾಥ ಪಾಟೀಲ, ಬಂದೇನವಾಜ ಲೋಣಿ, ಸದಸ್ಯರಾದ ಮೆಹಬೂಬ ಎನ್ಕೆ., ಆರೀಫ ಸಗರ, ಜೈನುಲ ಆಬಿದ್ದೀನ, ಸುಮೀತ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಬಾಗಲಕೋಟೆ:** ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಬಾಗಲಕೋಟೆ ಜಿಲ್ಲೆಯ ತಾಲೂಕುಗಳಿಗೆ 2 ಹೆಚ್.ಪಿ. ಸಾಮರ್ಥ್ಯದ ಮೇವು ಕತ್ತರಿಸುವ ಯಂತ್ರಗಳು ಹಾಗೂ ರಬ್ಬರ್ ನೆಲ ಹಾಸುಗಳು ಸರಬರಾಜಾಗುತ್ತಿದ್ದು, ನಿಗದಿತ ದರದಲ್ಲಿ ಸರ್ಕಾರದಿಂದ 50% ಸಹಾಯಧನ ಹಾಗೂ ಫಲಾನುಭವಿ ವಂತಿಕೆ 50% ರಂತೆ ಲಭ್ಯವಿರುತ್ತದೆ.

ಆಸಕ್ತ ರೈತರು ತಮ್ಮ ತಾಲೂಕಿನಲ್ಲಿರುವ ಪಶು ಆಸ್ಪತ್ರೆಗೆ ಭೇಟಿ ನೀಡಿ, ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ) ಇವರನ್ನು ಸಂಪರ್ಕಿಸಿ ನಿಗದಿತ ನಮೂನೆಯ ಅರ್ಜಿಯಲ್ಲಿ ಮಾಹಿತಿಯನ್ನು ಭರ್ತಿ ಮಾಡಿ ನವೆಂಬರ್ 10 ರೊಳಗಾಗಿ ಸಲ್ಲಿಸುವಂತೆ ಕೋರಿದೆ.

## ಪರಿಪಕ್ವ ಮೊತ್ತಕ್ಕಾಗಿ ಅರ್ಜಿ ಆಹ್ವಾನ

**ಬಾಗಲಕೋಟೆ:** ಭಾಗ್ಯಲಕ್ಷ್ಮೀ ಯೋಜನೆಯಡಿ ಬಾದಾಮಿ ತಾಲೂಕಿನ ಸನ್-2006-07ನೇ ಸಾಲಿನಲ್ಲಿ ಜನಿಸಿದ ಭಾಗ್ಯಲಕ್ಷ್ಮೀ ಫಲಾನುಭವಿಗಳಿಗೆ 18 ವರ್ಷ ಪೂರ್ಣಗೊಂಡಿದ್ದು, ಫಲಾನುಭವಿಗಳಿಗೆ ಪರಿಪಕ್ವ ಮೊತ್ತವನ್ನು ಪಡೆಯಲು ಕೊನೆಯ ದಿನಾಂಕ ಅಕ್ಟೋಬರ್ 30ರ ಒಳಗಾಗಿ ದಾಖಲಾತಿಗಳನ್ನು ಬಾದಾಮಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು ಎಂದು ಬಾದಾಮಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ದಸ್ತಗೀರಸಾಬ ಮುಲ್ಲಾ ತಿಳಿಸಿದ್ದಾರೆ.

## ನಿಧನ ವಾರ್ತೆ

### ಭೀಮಪ್ಪ ಪಕ್ಕಿರಪ್ಪ ಪೂಜೇರ



**ಯರಗಟ್ಟಿ:** ಸಮೀಪದ ರೈನಾಪೂರ ಗ್ರಾಮದ ನಿವಾಸಿ ಭೀಮಪ್ಪ ಪಕ್ಕಿರಪ್ಪ ಪೂಜೇರ(76) ಲಿಂಗೈಕ್ಯರಾದರು. ಮೃತರು ಸೋದರರು, ಸಹೋದರಿ, ಪುತ್ರ ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ.

### ಬಸವಂತ್ರಾಯ ಘಾಟಗೆ



**ಮುದ್ದೇಬಿಹಾಳ:** ಪಟ್ಟಣದ ನಿವಾಸಿ ಬಸವಂತ್ರಾಯ ಘಾಟಗೆ(65) ಶನಿವಾರ ನಸುಕಿನ ಜಾವ 4 ಘಂಟೆಗೆ ನಿಧನರಾದರು. ಮೃತರಿಗೆ ಮೂರು ಜನ ಪುತ್ರರು ನಾಲ್ಕು ಜನ ಪುತ್ರಿಯರು ಹಾಗೂ ಅಪಾರ ಬಂದುಬಳಗವನ್ನು ಅಗಲಿದ್ದಾರೆ.

### ಹುಸೇನಸಾಬ ಲಾಲಸಾಬ ಮುಲ್ಲಾ



**ಬಾದಾಮಿ:** ತಾಲೂಕಿನ ಅನವಾಲ ಗ್ರಾಮದ ನಿವಾಸಿಯಾಗಿದ್ದ ಹುಸೇನಸಾಬ ಲಾಲಸಾಬ ಮುಲ್ಲಾ (ದೇವನಾಳ) (74) ನಿಧನರಾದರು. ಮೃತರು ತಮ್ಮ ಹಿಂದೆ ಪತ್ನಿ, ಮೂವರು ಪುತ್ರರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue : 218, Postal Reg No. PMG/KA/NK/BM/135/25-27 / POST AT Vantamury Colony Post Office



**ಶ್ರೀ ಸಿದ್ದರಾಮಯ್ಯ**
ಮಾನ್ಯ ಮುಖ್ಯಮಂತ್ರಿಗಳು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

# ಪೊಲೀಸ್ ಸಂಸ್ಮರಣ ದಿನಾಚರಣೆ

21 ಅಕ್ಟೋಬರ್, 2025



**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು




## ಪೊಲೀಸ್ ಹುತಾತ್ಮರಿಗೆ ಹೃತ್ಪೂರ್ವಕ ನಮನ

ಪೊಲೀಸರ ಸೇವೆ ಅನುಪಮವಾದುದು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು, ರೋಗರುಜಿನ ಮುಂತಾದ ಸಾಂಕ್ರಾಮಿಕ ಸಂಕಷ್ಟದ ಸಂದರ್ಭದಲ್ಲಿ ಜನತೆಗೆ ನೆರವು ನೀಡಲು, ಸಮಾಜದಲ್ಲಿ ಶಾಂತಿ ಕಾಪಾಡಲು, ಸಮಾಜ ಘಾತುಕ ಶಕ್ತಿಗಳನ್ನು ನಿಯಂತ್ರಿಸಲು ನಮ್ಮ ಪೊಲೀಸರು ತಮ್ಮ ಜೀವದ ಹಂಗನ್ನು ತೊರೆದು ಅಹರ್ನಿಶಿ ಶ್ರಮಿಸುವರು. ಈ ನಮ್ಮ ಪೊಲೀಸರ ನಿಸ್ವಾರ್ಥ ಸೇವೆ, ಧೈರ್ಯ ಮತ್ತು ಸಾಹಸ ಶ್ಲಾಘನೀಯ. ಇಂತಹ ಮಹತ್ತರವಾದ ಕಾರ್ಯದಲ್ಲಿ ನಿರತವಾಗಿದ್ದ ಸಂದರ್ಭದಲ್ಲಿಯೇ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ನಿದರ್ಶನಗಳು ಬಹಳ.

**ಇಂತಹ ಮಹಾನ್ ತ್ಯಾಗಿಗಳ ಸಂಸ್ಮರಣೆ ಮಾಡುತ್ತಾ, ಎಲ್ಲಾ 8 ಹುತಾತ್ಮರಿಗೆ ನಾವು ಇಂದು ಮನಃಪೂರ್ವಕವಾಗಿ ಗೌರವ ಸಮರ್ಪಿಸೋಣ.**



**ಮುಖ್ಯ ಅತಿಥಿಗಳು**
**ಶ್ರೀ ಸಿದ್ದರಾಮಯ್ಯ**
ಮಾನ್ಯ ಮುಖ್ಯಮಂತ್ರಿಗಳು

**ಅಧ್ಯಕ್ಷತೆ**
**ಡಾ|| ಜಿ. ಪರಮೇಶ್ವರ**
ಮಾನ್ಯ ಗೃಹ ಸಚಿವರು

**ಕಾರ್ಯಕ್ರಮ**
**ದಿನಾಂಕ : 21-10-2025**
ಮಂಗಳವಾರ ಬೆಳಗ್ಗೆ 8-00 ಗಂಟೆಗೆ,
**ಸ್ಥಳ: ಹುತಾತ್ಮರ ಉದ್ಯಾನವನ**
ನಗರ ಸಶಸ್ತ್ರ ಮೀಸಲು ಪಡೆ ಕೇಂದ್ರಸ್ಥಾನ,
ಮೈಸೂರು ರಸ್ತೆ, ಬೆಂಗಳೂರು.

**ಕರ್ನಾಟಕದ 8 ಜನ ಪೊಲೀಸ್ ಹುತಾತ್ಮರು**

| ಕ್ರಮ ಸಂ | ಶ್ರೀಯುತರು | ಹುದ್ದೆ ಮತ್ತು ಮೆಟಲ್ ಸಂಖ್ಯೆ | ಜಿಲ್ಲೆ/ಘಟಕ |
|---|---|---|---|
| 1. | ಶ್ರೀ ಮೆಬೂಬು ಗುಡ್ಡಲಿಲ್ | ಪಿಎಸ್ಐ | ಬೆಂಗಳೂರು ನಗರ |
| 2. | ಶ್ರೀ ವೆಂಕಟಾಚಲಪತಿ ಕೆ.ಎನ್ | ಎಎಸ್ಐ | ಕೆಜಿಎಫ್ |
| 3. | ಶ್ರೀ ಗಿರೀಶ್.ಎಸ್ | ಎಆರ್ಎಸ್ಐ | ಡಿಎಆರ್, ತುಮಕೂರು ಜಿಲ್ಲೆ |
| 4. | ಶ್ರೀ ಬಸವರಾಜ ಎಂ. | ಸಿಹೆಚ್‌ಸಿ-287 | ಬೆಂಗಳೂರು ಜಿಲ್ಲೆ |
| 5. | ಶ್ರೀ ನಿಂಗರಾಜ್ ಟಿ. ಎಸ್. | ಎಹೆಚ್‌ಸಿ-90 | ಡಿಎಆರ್, ತುಮಕೂರು ಜಿಲ್ಲೆ |
| 6. | ಶ್ರೀ ಪ್ರಕಾಶ್.ಬಿ.ಯು | ಸ್ಪೆ ಆರ್‌ಹೆಚ್‌ಸಿ-36 | 11 ನೇ ಪಡೆ ಕೆ.ಎಸ್.ಆರ್.ಪಿ, ಹಾಸನ |
| 7. | ಶ್ರೀ ಮಹೇಶ್.ಎನ್.ಆರ್ | ಹೆಚ್‌ಸಿ-6713 | ಬೆಂಗಳೂರು ನಗರ |
| 8. | ಶ್ರೀ ರಾಮಪ್ಪ ಪೂಜಾರಿ | ಎಪಿಸಿ-104 | ಡಿಎಆರ್, ದಾವಣಗೆರೆ ಜಿಲ್ಲೆ |

**ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರು (ಪೊಲೀಸ್ ಪಡೆಯ ಮುಖ್ಯಸ್ಥರು), ಕರ್ನಾಟಕ ರಾಜ್ಯ, ಹಾಗೂ ರಾಜ್ಯದ ಸಮಸ್ತ ಪೊಲೀಸ್ ಅಧಿಕಾರಿಗಳು**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

